EMAIL : dairyadadaari@gmail.com ಸಂಪುಟ: 01 ಸಂಚಿಕೆ: 93
ಬೆಲೆ ರೂ : 2.00
ರಾಯಚೂರು
ಪುಟ: 4

ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793

KANNADA DAILY NEWS PAPER
ಕನ್ನಡ ದಿನಪತ್ರಿಕೆ

DAIRYADA DAARI
RNI NO: KNKAN/25/A2795 ಬುಧವಾರ: 18–03–2026

**SEHRI & IFTARI TIME**
DAY :WEDNESDAY
RAMZAN : 28
DATE: 18.03.2026
END TIME OF SEHRI :5:12 AM
FAJAR AZAAN : 5:17 AM

IFTAR TIME : 6:34 PM



ಸೈಯದ್ ಅಹ್ಮದ್ ಹುಸೇನಿ ಮತ್ ವಾಲೆ
ಕಾರ್ಯದರ್ಶಿಗಳು : ಮತ್ ವಾಲೆ ಸಾಹೇಬ್ ಪಬ್ಲಿಕ್ ಸ್ಕೂಲ್ ಮಾನ್ವಿ
ಸಂಪಾದಕರು : ಧೈರ್ಯದ ದಾರಿ ಕನ್ನಡ ದಿನಪತ್ರಿಕೆ

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ಇಂದಿನಿಂದ ಎಸ್ಎಸ್ಎಲ್‌ಸಿ ಪರೀಕ್ಷೆ : 2,871 ಪರೀಕ್ಷಾ ಕೇಂದ್ರಗಳಲ್ಲಿ ಸಿದ್ಧತೆ, ಉಚಿತ ಬಸ್ ಸೇವೆ

**ಬೆಂಗಳೂರು,ಮಾ.17–** ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಅತಿ ಮಹತ್ವದ ಘಟ್ಟ ಎನಿಸಿದ ಪ್ರಸಕ್ತ 2026 –27ನೇ ಸಾಲಿನ ಎಸ್ಎಸ್ಎಲ್‌ಸಿ –1 ಪರೀಕ್ಷೆಯು ಇಂದಿನಿಂದ ರಾಜ್ಯದಾದ್ಯಂತ ಭಾರೀ ಭಿಗಿ ಭದ್ರತಾ ನಡುವೆ ಆರಂಭವಾಗಲಿದೆ.
ನಾಳೆ ಪ್ರಥಮ ಭಾಷಾ ಪತ್ರಿಕೆಯೊಂದಿಗೆ ಪರೀಕ್ಷೆ ಆರಂಭವಾವಾಗಿ ಏಪ್ರಿಲ್ 2ರಂದು ಸವಾಜ ವಿಜ್ಞಾನ ಪತ್ರಿಕೆಯೊಂದಿಗೆ ಮುಕ್ತಾಯಗೊಳ್ಳಲಿದೆ. ಪರೀಕ್ಷೆಗಳು ಬೆಳಗ್ಗೆ 10 ಗಂಟೆಯಿಂದ ಮಧ್ಯಾಹ್ನ 1.15 ಗಂಟೆಯವರೆಗೆ ನಡೆಯಲಿವೆ.

ಈ ಬಾರಿ ಎಸ್ಎಸ್ಎಲ್‌ಸಿ ಪರೀಕ್ಷೆಗೆ ಒಟ್ಟು 9,02,889 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದಾರೆ. ಇದರಲ್ಲಿ 8,12,855 ಹೊಸಬರು, 62,845 ಪುನರಾವರ್ತಿತ ವಿದ್ಯಾರ್ಥಿಗಳು, 27,189 ಖಾಸಗಿ ವಿದ್ಯಾರ್ಥಿಗಳಿದ್ದು, 2,871 ಒಟ್ಟು ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯುತ್ತದೆ. ವಿದ್ಯಾರ್ಥಿಗಳಿಗೆ ಈಗಾಗಲೇ ಮಾದರಿ ಪ್ರಶ್ನೆಪತ್ರಿಕೆಗಳನ್ನು ವಿತರಿಸಲಾಗಿದೆ.

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಳಿಯು (ಕೆಎಸ್ ಇಎಬಿ) ಪರೀಕ್ಷೆಯನ್ನು ಪಾರದರ್ಶಕವಾಗಿ ಮತ್ತು



ಅಕ್ರಮ ಮುಕ್ತವಾಗಿ ನಡೆಸಲು ಸಕಲ ಸಿದ್ಧತೆ ಮಾಡಿಕೊಂಡಿದ್ದು, ವಿದ್ಯಾರ್ಥಿಗಳಿಗೆ ಕಟ್ಟುನಿಟ್ಟಿನ ಮಾರ್ಗಸೂಚಿಗಳನ್ನು ಹೊರಡಿಸಿದೆ. ಈ ಬಾರಿ ಪರೀಕ್ಷಾ ಫಲಿತಾಂಶವನ್ನು ಏಪ್ರಿಲ್ 7ರಂದು ಪ್ರಕಟಿಸುವ ಸಾಧ್ಯತೆ ಇದೆ ಎಂದು ಶಿಕ್ಷಣ ಇಲಾಖೆ ಮುಂಚಿತವಾಗಿಯೇ ಘೋಷಿಸಿದೆ.ಪೊಲೀಸ್ ಇಲಾಖೆ, ಗುಪ್ತಚರ ವಿಭಾಗ, ಜಿಲ್ಲಾಧಿಕಾರಿಗಳು, ಬಿಇಒ ಹಾಗೂ ಡಿಡಿಪಿಐಗಳೊಂದಿಗೆ ಸಮಗ್ರ ಸಭೆ ನಡೆಸಲಾಗಿದೆ. ಕಳೆದ ವರ್ಷಕ್ಕಿಂತ ಹೆಚ್ಚಿನ ಸಿದ್ಧತೆ ಈ ಬಾರಿ ಕೈಗೊಳ್ಳಲಾಗಿದೆ.

**ಅಕ್ರಮ ತಡೆಗೆ ಕಠಿಣ ಕ್ರಮ:** ಪರೀಕ್ಷಾ ಅಕ್ರಮಗಳನ್ನು ತಡೆಯಲು ಮತ್ತು ಪಾರದರ್ಶಕತೆ ಕಾಯ್ದುಕೊಳ್ಳಲು ಮಂಡಳಿಯು ಈ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳುತ್ತಿದೆ. ಪರೀಕ್ಷೆಯ ಸಮಯದಲ್ಲಿ ಸುಳ್ಳು ವದಂತಿಗಳನ್ನು ಹರಡುವವರ ವಿರುದ್ಧ ಕಾನೂನು ಕ್ರಮ ಜರುಗಿಸಲಲು ಮಂಡಳಿ ನಿರ್ಧರಿಸಿದೆ.

**ಸಿಸಿ ಟಿವಿ ಕ್ಯಾಮೆರಾ ಕಡ್ಡಾಯ:** ಪರೀಕ್ಷಾ ಅಕ್ರಮಗಳನ್ನು ತಡೆಯುವ ಉದ್ದೇಶದಿಂದ ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಸಿಸಿ ಟಿವಿ ಕ್ಯಾಮೆರಾಗಳನ್ನು ಕಡ್ಡಾಯಗೊಳಿಸಲಾಗಿದೆ. ಪರೀಕ್ಷಾ ಅವಧಿಯುದ್ದಕ್ಕೂ ಕಟ್ಟುನಿಟ್ಟಿನ ಮೇಲ್ವಿಚಾರಣೆ ನಡೆಯಲಿದ್ದು, ವಿಶೇಷ ತಂಡಗಳು ನಿರಂತರ ನಿಗಾ ವಹಿಸಲಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

**ಎಲೆಕ್ಟ್ರಾನಿಕ್ ಸಾಧನಗಳು ನಿಷೇಧ:** ಇದೇ ವೇಳೆ ಪರೀಕ್ಷಾ ಕೇಂದ್ರಗಳೊಳಗೆ ಮೊಬೈಲ್ ಫೋನ್, ಸಾರ್ಟ್‌ವಾಚ್ ಸೇರಿದಂತೆ ಎಲೆಕ್ಟ್ರಾನಿಕ್ ಸಾಧನಗಳನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ. ನಿಷೇಧಿತ ವಸ್ತುಗಳನ್ನು ಹೊಂದಿರುವ ವಿದ್ಯಾರ್ಥಿಗಳ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಂದು ಶಿಕ್ಷಣ 2ನೇಪುಟಕ್ಕೆ

# ಸಾಮೂಹಿಕ ವಿವಾಹದಲ್ಲಿ ಜೋಡಿಯಾದ ವಧುವರರು ಅದರ್ಶವಾದ ಜೀವನ ನಡೆಸಿ: ಶ್ರೀ ಉಜ್ಜಯಿನಿಜಗದ್ಗರು ಶ್ರೀ ಸಿದ್ದಲಿಂಗ ರಾಜದೇಶಿ ಕೇಂದ್ರ ಶಿವಾಚಾರ್ಯ ಭಗವತ್ಪಾದಂಗಳವರು

ಧೈರ್ಯದ ದಾರಿ

**ಮಾನ್ವಿ:** ತಾಲೂಕಿನ ಬಲ್ಲಟ್ಟಗಿ ಗ್ರಾಮದಲ್ಲಿನ ಶ್ರೀ ಲಿಂ, ಬಸವಲಿಂಗಯ್ಯತಾತನವರ ಹಿರೇಮಠ ಬಲ್ಲಟ್ಟಗಿ ಶ್ರೀ ಗಿರಿಜಾದೇವಿ ದೇವಸ್ಥಾನ ಹಿರೇಮಠ ಸುಕ್ಷೇತ್ರದ ಆವರಣದಲ್ಲಿ ನಡೆದ ಬಲ್ಲಟ್ಟಗಿ ಭಗವಂತನ 17 ನೇ ಜಾತ್ರಮಹೋತ್ಸವ ಹಾಗೂ ಶ್ರೀ ಯಡಿಯೂರು ಶ್ರೀ ಸಿದ್ದಲಿಂಗೇಶ್ವರ ಪುರಾಣ ಮಹಾಮಂಗಲೋತ್ಸವ ಕಾರ್ಯಕ್ರಮದ ಅಂಗವಾಗಿ ನಡೆದ 23 ಜೋಡಿ ಸಾಮೂಹಿಕ ವಿವಾಹ ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ವಹಿಸಿ ನೂತನ ವಧುವರರನ್ನು ಆಶೀರ್ವಾದಿಸಿ ಶ್ರೀಮದ್ ಶ್ರೀ ಉಜ್ಜಯಿನಿ ಸದ್ಧರ್ಮ ಸಿಂಹಾಸನಾಧೀಶ್ವರ ಜಗದ್ಗರು ಶ್ರೀ ಸಿದ್ದಲಿಂಗ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದಂಗಳವರು ಆಶೀರ್ವಾಚನ ನೀಡಿ ಪುಣ್ಯ ಕ್ಷೇತ್ರದಲ್ಲಿ ಜಗದ್ಗುರುಗಳ ಹಾಗೂ ಹರಗುರು ಚಾರಮೂರ್ತಿಗಳ ಆಶೀರ್ವಾದದೊಂದಿಗೆ ಅಪಾರ ಜನಸ್ತೋಮದ ನಡುವೆ ಗಣ್ಯರ ಉಪಸ್ಥಿತಿಯಲ್ಲಿ ಸಾಮೂಹಿಕ ವಿವಾಹವಾಗುವ 23 ಜೋಡಿಗಳು ಅತ್ಯಂತ ಭಾಗ್ಯವಂತರಾಗಿದ್ದಾರೆ, ಶ್ರೀ ಮಠದಲ್ಲಿ ಕಳೆದ 17 ವರ್ಷಗಳಿಂದ 5ನೂರಕ್ಕು ಹೆಚ್ಚು ಜೋಡಿಗಳು ವಿವಾಹವಾಗಿ ನೆಮ್ಮದಿಯ ಜೀವನವನ್ನು ನಡೆಸುತ್ತಿದ್ದಾರೆ. ಬಡವರ ಜೋತೆಗೆ ಉಳ್ಳವರು ಕೂಡ ತಮ್ಮ ಮಕ್ಕಳ ಮದುವೆಗಾಗಿ ದುಂದುವೆಚ್ಚವನ್ನು ಮಾಡದೆ ತಮ್ಮ ಮಕ್ಕಳ ಮದುವೆಯನ್ನು ಇಂತಹ ಪುಣ್ಯ ಕ್ಷೇತ್ರಗಳಲ್ಲಿ ಆರ್ಥಿಕವಾಗಿ ದುರ್ಬಲ ಕುಟುಂಬದವರ ಮಕ್ಕಳೊಂದಿಗೆ ಸರಳವಾದ ಸಾಮೂಹಿಕ ವಿವಾಹದಲ್ಲಿ ಮದುವೆ ಮಾಡುವ ಮೂಲಕ ಅನೇಕ ಬಡ ಕುಟುಂಬಗಳಿಗೆ ಆಸರೆಯಾಗಿ ಸಮಾಜಕ್ಕೆ ಮಾದರಿಯಾಗಬೇಕು,



ಸಾಮೂಹಿಕ ವಿವಾಹದಲ್ಲಿ ಜೋಡಿಯಾದ ವಧುವರರು ಅದರ್ಶವಾದ ಜೀವನವನ್ನು ನಡೆಸುವುದರ ಜೊತೆಗೆ ಕುಟುಂಬದ ಹಿರಿಯರಿಗೆ ಗೌರವ ನೀಡಬೇಕು , ಅವಿಭಕ್ತ ಕುಟುಂಬ ಪದ್ದತಿಯ ಪರಂಪರೆಯನ್ನು ಉಳಿಸಿ ಬೆಳೆಸುವ ಜವಾಬ್ದರಿ ನಮ್ಮ ಹೆಣ್ಣುಮಕ್ಕಳ ಮೇಲಿದೆ ತಮ್ಮ ಮಕ್ಕಳನ್ನು ರೈತರನ್ನಾಗಿ, ಯೋಧರನ್ನಾಗಿ , ಶಿಕ್ಷಕರನ್ನಾಗಿ, ಸಮಾಜದಲ್ಲಿ ಉತ್ತಮ ನಾಗರಿಕರನ್ನಾಗಿ ಬೆಳೆಸಿ ರೂಪಿಸುವ ಹೋಣೆ ಪ್ರತಿಯೊಬ್ಬ ದಂಪತಿಗಳ ಮೇಲಿದೆ. ನಮ್ಮ ವೀರಶೈವ ಲಿಂಗಾಯತ ಧರ್ಮದಲ್ಲಿ ಹೆಣ್ಣು ಮತ್ತು ಗಂಡಿಗೆ ಸಮಾನವಾದ ಸ್ಥಾನವನ್ನು ನೀಡಲಾಗಿರುವುದರಿಂದ ಗಂಡು ಮತ್ತು ಹೆಣ್ಣು ಮಕ್ಕಳನ್ನು ಸಮಾನವಾಗಿ ಕಂಡು ಅವರಿಗೆ ಉತ್ತಮವಾದ ಶಿಕ್ಷಣವನ್ನು ಸಂಸ್ಕಾರವನ್ನು ನೀಡಿ. ನಾಳೆ ಮತ್ತು ನಾಡಿದರಲ್ಲಿ ಬರುವ ಪರಭಾವ ಸಂವತ್ಸರದಲ್ಲಿ ಅನೇಕ ಸಂಕಷ್ಟಗಳು ಎದರಾಗಲಿದೆ ಅದ್ದರಿಂದ ಜನರು ಪುಣ್ಯವಂತರಾಗಿ, ,ನೀತಿವಂತರಾಗಿ ,ಧರ್ಮ ಕಾರ್ಯದಲ್ಲಿ ತೊಡಗಿಕೊಂಡಲ್ಲಿ ಉತ್ತಮ ಫಲಗಳು ದೊರೆಯುತ್ತವೆ ಉತ್ತಮ ಮಳೆ ಬೆಳೆಯಾಗಿ ಸಮೃದಿ ದೊರೆಯಲಿ ಎಂದು ಉಜ್ಜೀನಿ ಪೀಠದಿಂದ ಆಶೀರ್ವಾದ ನೀಡುತ್ತೇವೆ. ಶ್ರೀಮಠದ ಶ್ರೀಗಳಾದ ಗುರುಬಸಯ್ಯಸ್ವಾಮಿ ಶರಣರು ಈ ಭಾಗದಲ್ಲಿ ಅಧ್ಯಾತ್ಮಿಕ,ಸಾಮಾಜಿಕ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬಂದಿದ್ದಾರೆ ಅವರ ಕಾರ್ಯಗಳು ಮುಂದುವರೆಯಲ್ಲಿ ಎಂದು ತಿಳಿಸಿದರು.

ಶ್ರೀಮಠದಲ್ಲಿ 23 ಜೊಡಿಗಳು ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಒಂದಾದರು.ಶ್ರೀ ಯಡಿಯೂರು ಶ್ರೀ ಸಿದ್ದಲಿಂಗೇಶ್ವರ ಪುರಾಣ ಪ್ರವಚನವನ್ನು ಕರಾಬದಿನ್ನಿ ಶ್ರೀ ದೊಡ್ಡಬಸಯ್ಯ ಶಾಸ್ತ್ರಿಗಳು ನೀಡಿದರು. ಸಂಗೀತ ಅಮರೇಶ ಸಾಲಿಮಠ, ತಬಲ ಸಾತ್ ಆರ್. ಮಲ್ಲಿನಾಥಸ್ವಾಮಿ ನೀಡಿದರು. ಕಾರ್ಯಕ್ರಮದಲ್ಲಿ ನೀಲಗಲ್ ಡಾ.ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು, ಕರೆಗುಡ್ಡ ಶ್ರೀ ಮಹಾಂತೇಶ್ವರ ಮಠದ ಶ್ರೀ ಮಹಾಂತಲಿಂಗ ಮಹಾಸ್ವಾಮಿಗಳು, ರಾಯಚೂರು ಸೋಮವಾರ ಪೇಟೆಯ ಶ್ರೀ ಅಭಿನವ ರಾಯಚೋಟಿವೀರ ಶಿವಾಚಾರ್ಯ ಮಹಾಸ್ವಾಮಿಗಳು, ದೇವರಭೂಪುರ ಶ್ರೀ ಅಭಿನವ ಗಜದಂಡ ಶಿವಾಚಾರ್ಯ ಮಹಾಸ್ವಾಮಿಗಳು,ಶ್ರೀ ಅಭಿನವ ಸೋಮನಾಥ ಶಿವಾಚಾರ್ಯ ಮಹಾಸ್ವಾಮಿಗಳು, ಚಂದ್ರಶೇಖರ ಶಿವಾಚಾರ್ಯ ಮಹಾಸ್ವಾಮಿಗಳು ಅಲಮೇಲ, ತಡವಲಗಿ ಶ್ರೀ ರಾಯಚೋಟೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು, ನವಲಕಲ್ ಗಂಗಾಧರ ಮಹಾಸ್ವಾಮಿಗಳು, ಶ್ರೀಮಠದ ಶ್ರೀಗಳಾದ ಗುರುಬಸಯ್ಯಸ್ವಾಮಿ ಹಿರೇಮಠ, ಶ್ರೀ ಬಸವರಾಜಸ್ವಾಮಿ ಹಿರೇಮಠ ಸೇರಿದಂತೆ ವಿವಿಧ ಮಠಗಳ ಪೂಜ್ಯರು ಹಾಗೂ ಮಾಜಿ ಶಾಸಕರಾದ ಬಸವನಗೌಡ ಬ್ಯಾಗವಾಟ, ರಾಜಾ ವೆಂಕಟಪ್ಪನಾಯಕ, ಗಂಗಾಧರ ನಾಯಕ, ಡಾ,ಶರಣಪ್ಪ ಬಲ್ಲಟಗಿ, ಟಿ ಮಲ್ಲಿಕಾರ್ಜುನ ಪಾಟೀಲ ಬಲ್ಲಟ್ಟಗಿ ಮಲ್ಲಿಕಾರ್ಜುನ ಜಕ್ಕಲದಿನ್ನಿ, ಮೌನೇಶ ಹೆಚ್. ಮಲ್ಲಣ್ಣಸಾಹುಕರ್, ಸೇರಿದಂತೆ ಇನ್ನಿತರರು ಇದ್ದರು.

# “ಶಿಕ್ಷಕ ಕೇವಲ ಅಕ್ಷರ ಕಲಿಸುವ ಯಂತ್ರವಲ್ಲ”ಡಾ.ಬಸವರಾಜ ಕರಡಿಗುಡ್ಡ



**ಮಾನ್ವಿ –**ಪಿ ಎಂ ಶ್ರೀ. ಉನ್ನತೀಕರಿಸಿದ ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ, ಕನ್ಯಾ ಶಾಲೆ ಮಾನ್ವಿಯಲ್ಲಿ ವಿದ್ಯಾರ್ಥಿಗಳ ಬಿಳ್ಕೊಡುಗೆ ಹಾಗೂ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸಕರಾಗಿ ಆಗಮಿಸಿ

ಮಾತನಾಡಿದ ಡಾ.ಬಸವರಾಜ ಕರಡಿಗುಡ್ಡ ಇವರು ಶಿಕ್ಷಕರು ಕೇವಲ ಅಕ್ಷರ ಕಲಿಸುವ ಯಂತ್ರವಲ್ಲ, ವಿದ್ಯಾರ್ಥಿಯ ಕನಸಿಗೆ ಜೀವ ತುಂಬುವ ನೈಜ ರಕ್ಷಕ ಹಾಗೂ ವಿದ್ಯಾರ್ಥಿಗಳ ಸರ್ವೋತ್ತೋಮುಖ ಅಭಿವೃದ್ಧಿಗೆ ತಮ್ಮ ಇಡೀ ಜೀವಮಾನವನ್ನೇ ಧಾರೆ ಎರೆದು ಮಕ್ಕಳ ಉಜ್ವಲ ಭವಿಷ್ಯವನ್ನು ರೂಪಿಸುವ ಶಿಲ್ಪಿ ಶಿಕ್ಷಕರಾಗಿದ್ದಾರೆ .ಮಕ್ಕಳು ಆದರ್ಶ ನಾಯಕರ ಮೌಲ್ಯಗಳನ್ನು, ತತ್ವಗಳನ್ನು ಅಳವಡಿಸಿಕೊಳ್ಳುವುದರ ಜೊತೆಗೆ ದಯೆ, ಕರುಣೆ, ಪ್ರೀತಿ ವಾತ್ಸಲ್ಯ, ಸಹನೆ, ಸಹಕಾರ ಸ್ನೇಹ ಪರ ಗುಣಗಳನ್ನು ಬೆಳೆಸಿಕೊಂಡು ದೇಶಕ್ಕೆ ಮಾದರಿಯಾಗುವ ನಿಟ್ಟಿನಲ್ಲಿ ಜೀವನವನ್ನು ರೂಪಿಸಿಕೊಳ್ಳಬೇಕೆಂದು ತಿಳಿಸಿದರು. ಶಾಲೆಗಳಲ್ಲಿ ಸರಕಾರಿ ಮತ್ತು ಖಾಸಗಿ ಶಾಲೆಗಳು ಎನ್ನುವ ಭೇದ ಭಾವವನ್ನು ಮರೆತು ಓದುವುದರ ಕಡೆ ಹೆಚ್ಚು ಗಮನಹರಿಸಬೇಕು. ಇತ್ತೀಚಿನ ದಿನಗಳಲ್ಲಿ ಖಾಸಗೀಕರಣದ ವ್ಯಾಮೋಹಕ್ಕೆ ಪಾಲಕ ಪೋಷಕರು ಬಲಿಯಾಗುತ್ತಿದ್ದು, ಮಾತ್ರವಲ್ಲದೇ ದುಬಾರಿ ಹಣವನ್ನು ಖರ್ಚು ಮಾಡಿ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಕೊಡಿಸುತ್ತೀವಿ ಎಂಬ ನೆಪದಲ್ಲಿ ಆರ್ಥಿಕವಾಗಿ ಸಾಲದ ಹೊರೆ ಯಲ್ಲಿ ಜೀವನ ಸಾಗುತ್ತಿರುವುದು ವಿಷಾದನೀಯವಾಗಿದೆ. ಆದುದರಿಂದ ಮಕ್ಕಳನ್ನು ಸರಕಾರಿ ಶಾಲೆಗಳಲ್ಲಿ

ಓದಿಸುವುದರ ಜೊತೆಗೆ ಸರಕಾರಿ ಶಾಲೆಗಳನ್ನು ಉಳಿಸುವ ನಿಟ್ಟಿನಲ್ಲಿ ಪ್ರಯತ್ನ ಮಾಡಬೇಕಾಗಿದೆ ಎಂದರು. ಇತ್ತೀಚಿನ ದಿನಗಳಲ್ಲಿ ಸರಕಾರವು ಪಿಎಂಶ್ರೀ ಶಾಲೆಗಳಲ್ಲಿ 2ನೇಪುಟಕ್ಕೆ

# ಮಾರ್ಚ್ ಮಾಹೆಯ ಪಡಿತರ ಧಾನ್ಯ ವಿತರಣೆ: ಜಿಲ್ಲಾಧಿಕಾರಿ ನಿತೀಶ್ ಕೆ.

ಧೈರ್ಯದ ದಾರಿ

**ರಾಯಚೂರು ಮಾ,17–** ಇಲ್ಲಿಯ ಜಿಲ್ಲಾ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ 2026ರ ಮಾರ್ಚ್ ಮಾಹೆಯ ಪಡಿತರ ಧಾನ್ಯಗಳನ್ನು ವಿತರಣೆ ಮಾಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.

ಮಾರ್ಚ್ 2026 ರ ಮಾಹೆಗೆ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ರಾಯಚೂರು ಜಿಲ್ಲೆಯ ಕೇಂದ್ರ ವ್ಯಾಪ್ತಿಯ ಪ್ರತಿ ಅಂತ್ಯೋದಯ(ಎಎವೈ) ಪಡಿತರ ಚೀಟಿಗೆ 35 ಕೆ.ಜಿ ಸಾರವರ್ಧಿತ ಅಕ್ಕಿ ಹಾಗೂ ಕೇಂದ್ರ ವ್ಯಾಪ್ತಿಯ ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 05 ಕೆ.ಜಿ ಸಾರವರ್ಧಿತ ಅಕ್ಕಿ ಇದರ ಜೊತೆಗೆ ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿಯಲ್ಲಿ ರಾಜ್ಯ ಸರ್ಕಾರದ ಮಾರ್ಗಸೂಚಿಯಂತೆ ಏಕ ಸದಸ್ಯ, ದ್ವಿ–ಸದಸ್ಯ ಮತ್ತು ತ್ರಿ–ಸದಸ್ಯ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕಿಂತ ಹೆಚ್ಚಿನ ಸದಸ್ಯರುಳ್ಳ ಕೇಂದ್ರ & ರಾಜ್ಯ ವ್ಯಾಪ್ತಿಯ ಅಂತ್ಯೋದಯ (ಎಎವೈ) ಮತ್ತು ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಹೆಚ್ಚುವರಿಯಾಗಿ 05 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುವುದು.

ಒಂದು ರಾಷ್ಟ್ರ ಒಂದು ಪಡಿತರ ಚೀಟಿ (ಅಂತರ್ ರಾಜ್ಯ/ ಅಂತರ್ ಜಿಲ್ಲೆ) ಪೋರ್ಟೆಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ರಾಜ್ಯದ ಪಡಿತರ ಚೀಟಿದಾರರು ಯಾವುದೇ ವರ್ಗದ ಪಡಿತರ ಚೀಟಿದಾರರು ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಯಾವುದೇ ನ್ಯಾಯಬೆಲೆ ಅಂಗಡಿಕಾರರು ಕಡಿಮೆ ಪ್ರಮಾಣದ ಪಡಿತರವನ್ನು ವಿತರಣೆ ಮಾಡಿದ್ದಲ್ಲಿ, ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ನಿಶುಲ್ಕ ದೂರವಾಣಿ ಸಂಖ್ಯೆ



1967ಗೆ ಹಾಗೂ ತಾಲ್ಲೂಕಿನಲ್ಲಿರುವ ತಹಶೀಲ್ದಾರರ ಕಚೇರಿಗೆ ಅಥವಾ ಜಿಲ್ಲೆಯ ಉಪನಿರ್ದೇಶಕರ ಕಚೇರಿಗೆ ದೂರನ್ನು ಸಲ್ಲಿಸಬಹುದಾಗಿದೆ.

ಈ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಸದರಿ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತ್ತುಗೊಳಿಸಲಾವುದೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೊದಲನೇ ಪುಟದಿಂದ

# ನಾಳೆಯಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ : 2,871 ಪರೀಕ್ಷಾ ಕೇಂದ್ರಗಳಲ್ಲಿ ಸಿದ್ಧತೆ, ಉಚಿತ ಬಸ್ ಸೇವೆ

ಇಲಾಖೆ ಎಚ್ಚರಿಕೆ ನೀಡಿದೆ.

**ಸೈಬರ್ ಕೇಂದ್ರಗಳ ಮೇಲೆ ನಿಗಾ:** ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಇರುವ ಕೋಚಿಂಗ್ ಸೆಂಟರ್, ಸೈಬರ್‌ಕೆಫೆ ಹಾಗೂ ಜೆರಾಕ್ಸ್ ಅಂಗಡಿಗಳ ಮೇಲೆ ವಿಶೇಷ ನಿಗಾವಹಿಸಲು ಪೊಲೀಸ್ ಇಲಾಖೆಗೆ ಸೂಚಿಸಿದೆ. ಪರೀಕ್ಷಾ ಕೇಂದ್ರಗಳಲ್ಲಿ ಯಾವುದೇ ಲೋಪ ದೋಷಗಳಾಗದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ.ಸಾಮಾಜಿಕ ಜಾಲತಾಣಗಳಲ್ಲಿ ಪ್ರಶ್ನೆಪತ್ರಿಕೆ ಸೋರಿಕೆ ಅಥವಾ ಸುಳ್ಳು ವದಂತಿಗಳನ್ನು ಹರಡುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಲಾಗಿದೆ.

ವಿದ್ಯಾರ್ಥಿಗಳು ಯಾವುದೇ ಆತಂಕವಿಲ್ಲದೆ ಪರೀಕ್ಷೆ ಬರೆಯಲು ಅನುಕೂಲವಾಗುವಂತೆ ಎಲ್ಲಾ ವ್ಯವಸ್ಥೆಗಳನ್ನು ಮಾಡಲಾಗಿದೆ. ವಿದ್ಯಾರ್ಥಿಗಳು ಕಡ್ಡಾಯವಾಗಿ ನಿಯಮಗಳನ್ನು ಪಾಲಿಸಬೇಕು. ಅಧಿಕೃತ ಪ್ರವೇಶಪತ್ರವಿಲ್ಲದೆ ಪರೀಕ್ಷಾ ಕೇಂದ್ರಕ್ಕೆ ಪ್ರವೇಶವಿರುವುದಿಲ್ಲ. ಪರೀಕ್ಷೆ ಆರಂಭವಾಗುವ ಕನಿಷ್ಠ 30 ನಿಮಿಷಗಳ ಮೊದಲೇ ಪರೀಕ್ಷಾ ಕೇಂದ್ರದಲ್ಲಿ ಇರಬೇಕು. ಶಾಲೆಯು ನಿಗದಿಪಡಿಸಿದ ಸಮವಸ್ತ್ರ ಧರಿಸುವುದು ಸೂಕ್ತ. ಪರೀಕ್ಷಾ ಕೇಂದ್ರದ ಸುತ್ತಲಿನ 200 ಮೀಟರ್ ವ್ಯಾಪ್ತಿಯಲ್ಲಿ 144ನೇ ಕಲಂ ಅನ್ವಯ ನಿಷೇಧಾಜ್ಞೆ ಜಾರಿಯಲ್ಲಿರುತ್ತದೆ. ಅಲ್ಲದೆ ಪರೀಕ್ಷಾ ಸಮಯದಲ್ಲಿ ಕೇಂದ್ರದ ಸಮೀಪವಿರುವ ಎಲ್ಲಾ ಜೆರಾಕ್ಸ್ ಅಂಗಡಿಗಳನ್ನು ಮುಚ್ಚಲು ಆದೇಶಿಸ ಲಾಗಿದೆ.

ಕುಡಿಯುವ ನೀರು, ಬೆಳಕು ಸೇರಿದಂತೆ ಪರೀಕ್ಷಾ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯ ಗಳ ಕೊರತೆಯಾಗದಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ವಿದ್ಯಾರ್ಥಿಗಳು ಮತ್ತು ಪೋಷಕರು ಅಧಿಕೃತ ಸೂಚನೆಗಳನ್ನು ಎಚ್ಚರಿಕೆಯಿಂದ ಪಾಲಿಸಬೇಕು, ಮುಂಚಿತವಾಗಿ ಕೇಂದ್ರಗಳನ್ನು ತಲುಪಬೇಕು ಮತ್ತು ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು ಸುಗಮವಾಗಿ ನಡೆಯುವಂತೆ ಅಧಿಕಾರಿಗಳೊಂದಿಗೆ ಸಹಕರಿಸಬೇಕು ಎಂದು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಳಿ ಅಧ್ಯಕ್ಷ ಪ್ರಕಾಶ್ ಜಿ.ಟಿ.ನಿಟ್ಟಾಲಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.
ಪರೀಕ್ಷಾ ಸಹಾಯವಾಣಿ ಸಂಖ್ಯೆ: ಪರೀಕ್ಷೆಗೆ ಸಂಬಂಧಿಸಿದ ಯಾವುದೇ ಮಾಹಿತಿ ಅಥವಾ ಸಮಸ್ಯೆಗಳಿಗಾಗಿ ವಿದ್ಯಾರ್ಥಿಗಳು ಹಾಗೂ ಪೋಷಕರು ಈ ಸಹಾಯವಾಣಿ ಸಂಖ್ಯೆ080-23310076 / 080-23310075 ಸಂಪರ್ಕಿಸ ಬಹುದು.

ಒಟ್ಟು ವಿದ್ಯಾರ್ಥಿಗಳು-9,02,889
ಹೊಸಬರು-8,12,855
ಪುನರಾವರ್ತಿತ- 62,845
ಖಾಸಗಿ-27,189

ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಉಚಿತ ಬಸ್ ಸೇವೆ

ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಗಳು ನಾಳೆಯಿಂದ ಆರಂಭವಾಗಲಿದ್ದು, ವಿದ್ಯಾರ್ಥಿಗಳಿಗೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣಿಸುವ ಸೌಲಭ್ಯ ಒದಗಿಸಲಾಗಿದೆ.
ನಾಳೆಯಿಂದ ಏ.2 ರ ವರೆಗೆ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಗಳಿಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ತಮ ವಾಸಸ್ಥಳದಿಂದ ನಿಯೋಜಿತ ಪರೀಕ್ಷಾ ಕೇಂದ್ರದವರೆಗೆ, ಹೋಗುವಾಗ ಮತ್ತು ಹಿಂದಿರುಗುವಾಗ, ಪರೀಕ್ಷೆಯ ಪ್ರವೇಶ ಪತ್ರವನ್ನು ತೋರಿಸಿ, ಉಚಿತವಾಗಿ ಪ್ರಯಾಣಿಸಬಹುದಾಗಿದೆ.
ನಿಗಮದ ನಗರ, ಹೊರವಲಯ, ಸಾಮಾನ್ಯ ಹಾಗೂ ವೇಗದೂತ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಿದ್ದು, ವಿದ್ಯಾರ್ಥಿ ವರ್ಗದವರು ಈ ಸೌಲಭ್ಯವನ್ನು ಪಡೆದುಕೊಳ್ಳಬೇಕಾಗಿ ನಿಗಮದ ಪ್ರಕಟಣೆ ತಿಳಿಸಿದೆ.

# "ಶಿಕ್ಷಕ ಕೇವಲ ಅಕ್ಷರ ಕಲಿಸುವ ಯಂತ್ರವಲ್ಲ"ಡಾ.ಬಸವರಾಜ ಕರಡಿಗುಡ್ಡ

ವಿಷಯವಾರು ಶಿಕ್ಷಕರನ್ನು ನೇಮಕ ಮಾಡಿ ಪ್ರತಿಯೊಬ್ಬ ಮಗುವಿಗೆ ಗುಣಮಟ್ಟದ ಶಿಕ್ಷಣವನ್ನು ನೀಡುವಲ್ಲಿ ಪ್ರಯತ್ನಿಸುತ್ತಿರುವುದು ಸಂತಸದ ವಿಷಯವಾಗಿದೆ. ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯ ಗುರುಗಳಾದ ಶ್ರೀ ಹಂಪಣ್ಣ ಚಂಡೂರು ಇವರು ಪ್ರಾಸ್ತಾಮಕ ನುಡಿಗಳನ್ನು ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಶಾಲೆಯ ಎಸ್.ಡಿ.ಎಂ.ಸಿ ಅಧ್ಯಕ್ಷರಾದ ಶ್ರೀ ಸುನೀಲ್ ಪವರ್, ಉಪಾಧ್ಯಕ್ಷರಾದ ಶ್ರೀಮತಿ ಶಾಂತಮ್ಮ ಹಾಗೂ ಸರ್ವ ಸದಸ್ಯರು, ಶಾಲೆಯ ಶಿಕ್ಷಕ ವೃಂದ ಮತ್ತು ಶಾಲಾ ಮಕ್ಕಳು ಉಪಸ್ಥಿತರಿದ್ದರು. ಕಾರ್ಯಕ್ರಮದ ನಿರೂಪಣೆಯನ್ನು ಶಿಕ್ಷಕರಾದ ಸುರೇಶ್ ಜಗ್ಗಿ ಮರಕಮದಿನ್ನಿ ಅವರು ನೆರವೇರಿಸಿದರು.

# ಸಿರವಾರ: ಯುಗಾದಿ ಮತ್ತು ರಂಜಾನ್ ಹಿನ್ನೆಲೆ ಪೊಲೀಸ್ ಠಾಣೆಯಲ್ಲಿ ಶಾಂತಿ ಸಭೆ



ಧೈರ್ಯದ ದಾರಿ

**ಸಿರವಾರ:** ಮುಂಬರುವ ಯುಗಾದಿ ಮತ್ತು ಪವಿತ್ರ ರಂಜಾನ್ ಹಬ್ಬಗಳನ್ನು ತಾಲ್ಲೂಕಿನಾದ್ಯಂತ ಶಾಂತಿ, ಸೌಹಾರ್ದತೆ ಹಾಗೂ ಸಡಗರದಿಂದ ಆಚರಿಸುವ ಉದ್ದೇಶದಿಂದ ಇಂದು ಸ್ಥಳೀಯ ಪೊಲೀಸ್ ಠಾಣೆಯಲ್ಲಿ ಶಾಂತಿ ಸಭೆಯನ್ನು ಹಮ್ಮಿಕೊಳ್ಳಲಾಗಿತ್ತು.
ಸಭೆಯಲ್ಲಿ ವಿವಿಧ ಸಮುದಾಯಗಳ ಮುಖಂಡರು ಭಾಗವಹಿಸಿ, ಹಬ್ಬಗಳ ಸಂದರ್ಭದಲ್ಲಿ ಪರಸ್ಪರ ಸಹಬಾಳ್ವೆಯಿಂದ ನಡೆದುಕೊಳ್ಳುವ ಕುರಿತು ಚರ್ಚಿಸಿದರು.

**ಹಬ್ಬಗಳು ಸೌಹಾರ್ದತೆಯ ಪ್ರತೀಕ: ಕೃಷ್ಣನಾಯಕ್**
ಹಿಂದೂ ಸಮಾಜದ ಮುಖಂಡರಾದ ಕೃಷ್ಣನಾಯಕ್ ಮಾತನಾಡಿ, "ಹಬ್ಬಗಳು ನಮ್ಮ ಸಂಸ್ಕೃತಿಯ ಮತ್ತು ಭಾವೈಕ್ಯತೆಯ ಸಂಕೇತ. ಸಿರವಾರದಲ್ಲಿ ಮೊದಲಿನಿಂದಲೂ ಯುಗಾದಿ ಮತ್ತು ರಂಜಾನ್ ಹಬ್ಬಗಳನ್ನು ಎಲ್ಲರೂ ಸೇರಿ ಸೌಹಾರ್ದತೆಯಿಂದ ಆಚರಿಸಿಕೊಂಡು ಬಂದಿದ್ದೇವೆ. ಈ ಬಾರಿಯೂ ನಾವೆಲ್ಲರೂ ಪರಸ್ಪರ ಪ್ರೀತಿ-ವಿಶ್ವಾಸದಿಂದ ಹಬ್ಬ ಆಚರಿಸುವ ಮೂಲಕ ಸಮಾಜಕ್ಕೆ ಒಳ್ಳೆಯ ಸಂದೇಶ ನೀಡೋಣ," ಎಂದರು.

**ಮಾನವೀಯತೆಯೇ ಶ್ರೇಷ್ಠ ಧರ್ಮ: ಎಂ.ಡಿ. ಹುಸೇನ್**
ಮುಸ್ಲಿಂ ಸಮುದಾಯದ ಮುಖಂಡರಾದ ಎಂ.ಡಿ. ಹುಸೇನ್ ಮಾತನಾಡಿ, "ಧರ್ಮಗಳು ಬೇರೆಯಾದರೂ ಮಾನವೀಯತೆ ಎಂಬುದು ಒಂದೇ. ರಂಜಾನ್ ಮತ್ತು ಯುಗಾದಿ ಹಬ್ಬಗಳು ಒಟ್ಟಾಗಿ ಬಂದಿರುವುದು ಬಹಳ ಸಂತಸದ ಸಂಗತಿ. ಪ್ರತಿಯೊಬ್ಬ ನಾಗರಿಕನು ಶಾಂತಿ ಕಾಪಾಡಬೇಕು. ಪೊಲೀಸರೊಂದಿಗೆ ಸಹಕರಿಸಿ, ಯಾವುದೇ ಅಹಿತಕರ ಘಟನೆಗಳಿಗೆ ಆಸ್ಪದ ನೀಡದಂತೆ ಹಬ್ಬಗಳನ್ನು ಸಂಭ್ರಮಿಸೋಣ," ಎಂದು ಕರೆ ನೀಡಿದರು.

**ಪೊಲೀಸ್ ಇಲಾಖೆಯ ಕಟ್ಟುನಿಟ್ಟಿನ ಸೂಚನೆ:**
ವೃತ್ತ ನಿರೀಕ್ಷಕರು ಅಧಿಕಾರಿಗಳಾದ ಶಶಿಕಾಂತ್ ಎಂ ಅವರು ಮಾತನಾಡಿ , ಹಬ್ಬಗಳ ಸಮಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಸಾರ್ವಜನಿಕರು ಇಲಾಖೆಯೊಂದಿಗೆ ಕೈಜೋಡಿಸಬೇಕು. ವಿಶೇಷವಾಗಿ ಸಾಮಾಜಿಕ ಜಾಲತಾಣಗಳಲ್ಲಿ ಹರಡುವ ಸುಳ್ಳು ವದಂತಿಗಳಿಗೆ ಸಾರ್ವಜನಿಕರು ಕಿವಿಗೊಡಬಾರದು. ಯಾವುದೇ ಅನುಮಾನಾಸ್ಪದ ಚಟುವಟಿಕೆಗಳು ಕಂಡುಬಂದಲ್ಲಿ ಕೂಡಲೇ ಪೊಲೀಸರಿಗೆ ಮಾಹಿತಿ ನೀಡಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಪಟ್ಟಣದ ಪ್ರಮುಖ ಗಣ್ಯರು, ವಿವಿಧ ಕನ್ನಡಪರ ಹಾಗೂ ಸಾಮಾಜಿಕ ಸಂಘಟನೆಗಳ ಪದಾಧಿಕಾರಿಗಳು ಮತ್ತು ಪೊಲೀಸ್ ಸಿಬ್ಬಂದಿ ಉಪಸ್ಥಿತರಿದ್ದರು.

# ದೇವರ ದಾಸಿಮಯ್ಯ ಜಯಂತಿ ಆಚರಣೆ; ಪೂರ್ವಭಾವಿ ಸಿದ್ಧತಾ ಸಭೆ



ಧೈರ್ಯದ ದಾರಿ

**ರಾಯಚೂರು ಮಾ,17–** ಜಿಲ್ಲಾಡಳಿತದಿಂದ ಮಾರ್ಚ್ 23ರ ಸೋಮವಾರ ದಂದು ದೇವರ ದಾಸಿಮಯ್ಯ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಾರ್ಚ್ 17ರ ಮಂಗಳವಾರ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ದೇವರ ದಾಸಿಮಯ್ಯ ಜಯಂತಿ ಕುರಿತು ಪೂರ್ವಭಾವಿ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರದ ಮಾರ್ಗಸೂಚಿಯನ್ವಯ ಜಯಂತಿ ಆಚರಣೆ ನಡೆಯಬೇಕು. ಶಿಷ್ಟಾಚಾರ ಅನುಸಾರ ಆಮಂತ್ರಣ ಪತ್ರಿಕೆ ಮುದ್ರಿಸಿ ವಿತರಿಸಬೇಕು. ಜಯಂತಿಗೆ ಆಗಮಿಸುವ ಜನತೆಗೆ ಕುಡಿಯುವ ನೀರು, ಉಪಹಾರ, ಆಸನದ ವ್ಯವಸ್ಥೆ ಮಾಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಯಂತಿಯನ್ನು ಜಿಲ್ಲೆಯ ಎಲ್ಲ ಶಾಲಾ-ಕಾಲೇಜುಗಳು ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ ಆಚರಣೆ ಮಾಡುವಂತೆ ಆದೇಶ ಹೊರಡಿಸಲು ಕ್ರಮ ವಹಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಾ.23ರಂದು ಶ್ರೀ ದೇವರ ದಾಸಿಮಯ್ಯ ಜಯಂತಿ ಅಂಗವಾಗಿ ಅಂದು ಬೆಳಿಗ್ಗೆ 9ಕ್ಕೆ ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ಮೆರವಣಿಗೆ ಪ್ರಾರಂಭವಾಗಲಿದೆ. ಬೆಳಿಗ್ಗೆ 11 ಗಂಟೆಗೆ ನಗರದ ಪಂಡಿತ್ ಸಿದ್ದರಾಮಯ ಜಂಬಲದಿನ್ನಿ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದ್ದು, ಸಮಾಜದ ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗುವಂತೆ ಅಪರ ಜಿಲ್ಲಾಧಿಕಾರಿಗಳು ಸಭೆಯ ಮೂಲಕ ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ, ಸಮಾಜದ ಮುಖಂಡರಾದ ಜಿ.ನಾಗರಾಜ ಮಾನವಿ, ಈರಣ್ಣ, ಉದಯ ಕುಮಾರ್, ವೆಂಕಟೇಶ, ಶಿವಾನಂದ, ಶ್ರೀನಿವಾಸ ರಾವ್, ನಿತೀಶ್, ನಾಗಪ್ಪ, ಬಸವರಾಜ, ಹೆಚ್.ಜಮದಗಿನ್ನಿ ಸೇರಿದಂತೆ ಇತರು ಇದ್ದರು.

# ಓದುವ ಅಭ್ಯಾಸ ರೂಪಿಸಿಕೊಳ್ಳಲು ವಿದ್ಯಾರ್ಥಿಗಳಿಗೆ ಸಲಹೆ



ಧೈರ್ಯದ ದಾರಿ

**ರಾಯಚೂರು ಮಾ,17–** ವಿದ್ಯಾರ್ಥಿಗಳು ಸಾಮಾಜಿಕ ಜಾಲತಾಣಗಳ ಬಳಕೆ ಕಡಿಮೆ ಮಾಡಿ, ಉತ್ತಮವಾಗಿ ಓದುವ ಅಭ್ಯಾಸ ರೂಢಿಸಿಕೊಳ್ಳಬೇಕು ಎಂದು ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿಗಳಾದ ಹಾಲಸಿದ್ದಪ್ಪ ಪೂಜಾರಿ ಅವರು ಹೇಳಿದರು.

ಮಾರ್ಚ್ 17ರ ಮಂಗಳವಾರ ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದ್ದ 10ನೇ ತರಗತಿ, ಪಿಯುಸಿ ನಂತರ ವೃತ್ತಿ ಪ್ರಪಂಚದ ಅರಿವು ಮೂಡಿಸಲು ವೃತ್ತಿ ಶಿಕ್ಷಣ ಪ್ರದರ್ಶನ ಮತ್ತು ಕೆರಿಯರ್ ಮೇಳಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ತಮ್ಮ ತಂದೆ- ತಾಯಿಯವರ ಕನಸುಗಳನ್ನು ಈಡೇರಿಸಬೇಕು. ವಿದ್ಯಾರ್ಥಿಗಳು ಕೌಶಲದ ಕಡೆ ಗಮನಹರಿಸಬೇಕು. ಎಐ ಬಗ್ಗೆ ವಿದ್ಯಾರ್ಥಿಗಳು ಸರಿಯಾಗಿ ತಿಳಿದುಕೊಳ್ಳಬೇಕು. ಹತ್ತನೇ ಹಾಗೂ ದ್ವಿತೀಯ ಪಿಯುಸಿ ನಂತರ ಕೋರ್ಸ್‌ಗಳ ಆಯ್ಕೆಗೆ ಈ ಮೇಳ ಸಹಕಾರಿಯಾಗಿದೆ ಎಂದರು. ಜಿಲ್ಲೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಬಿಸಿಲಿನ ತಾಪಮಾನ ಏರಿಕೆಯಾಗಿದ್ದು, ವಿದ್ಯಾರ್ಥಿಗಳು ತಮ್ಮ ಆರೋಗ್ಯ ಕಡೆಗೆ ಹೆಚ್ಚಿನ ಕಾಳಜಿ ವಹಿಸಬೇಕು. ಸರಿಯಾದ ಸಮಯಕ್ಕೆ ಹೆಚ್ಚಾಗಿ ನೀರು ಕುಡಿಯಬೇಕು. ಜಿಲ್ಲಾಡಳಿತದಿಂದ ಈ ಬಗ್ಗೆ ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಲಾಗಿದೆ. ಅವುಗಳನ್ನು ಎಲ್ಲರೂ ಪಾಲಿಸಬೇಕು ಎಂದರು.

ಈ ವೇಳೆ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ.ಡಿ.ಬಡಿಗೇರ ಅವರು ಮಾತನಾಡಿ, ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ವೃತ್ತಿಪರ ಕೌಶಲ್ಯಗಳನ್ನು ಬೆಳೆಸಿಕೊಂಡು ಜೀವನದಲ್ಲಿ ಉನ್ನತ ಸಾಧನೆ ಮಾಡಬೇಕು ಎಂದರು.

**ವಿವಿಧ ಮಳಿಗೆ ಉದ್ಘಾಟನೆ:** ನಗರದ ರಂಗಮಂದಿರದ ಆವರಣದಲ್ಲಿ ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕಾಗಿ

ವಿಶೇಷ ಅವಕಾಶ ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಹಂತದ ವಿದ್ಯಾರ್ಥಿಗಳಿಗೆ ಮುಂದಿನ ಶಿಕ್ಷಣ, ವಿದ್ಯಾರ್ಥಿ ವೇತನ ಮತ್ತು ಉದ್ಯೋಗಾವಕಾಶಗಳ ಬಗ್ಗೆ ಸಮಗ್ರ ಮಾಹಿತಿ ಹಾಗೂ ಮಾರ್ಗದರ್ಶನ ನೀಡುವ ಉದ್ದೇಶದಿಂದ ಸ್ಥಾಪಿಸಲಾಗಿದ್ದ ವಿವಿಧ ಮಳಿಗೆಗಳಿಗೆ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ ಅವರು ಚಾಲನೆ ನೀಡಿದರು.

ಮಳಿಗೆಯಲ್ಲಿ ಕೃಷಿ ವಿಶ್ವವಿದ್ಯಾಲಯ ಅಡಿಯಲ್ಲಿನ ಕೋರ್ಸ್ಗಳ ಮಾಹಿತಿ, ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಜಿಲ್ಲಾ ಆರೋಗ್ಯ ಇಲಾಖೆ, ಕಾರ್ಮಿಕ ಕಲ್ಯಾಣ ಇಲಾಖೆ ಸೇರಿದಂತೆ ಇತರೆ ಸರ್ಕಾರಿ ಇಲಾಖೆಗಳಿಂದ ವಿವಿಧ ಶಿಕ್ಷಣಾವಕಾಶಗಳು, ತಾಂತ್ರಿಕ ಶಿಕ್ಷಣ, ಐಟಿಐ, ಡಿಪ್ಲೋಮಾ, ಎಂಜಿನಿಯರಿಂಗ್, ಮೆಡಿಕಲ್, ಕೌಶಲ್ಯ ತರಬೇತಿ, ಕೃಷಿ, ಕಂಪ್ಯೂಟರ್ ಕೋರ್ಸ್‌ಗಳು, ವಿದ್ಯಾರ್ಥಿ ವೇತನ, ತರಬೇತಿ ಕೇಂದ್ರಗಳ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಲಾಯಿತು.

1,407ಕ್ಕೂ ಹೆಚ್ಚು ವಿದ್ಯಾರ್ಥಿಗಳು ನೋಂದಣಿ: ವೃತ್ತಿ ಶಿಕ್ಷಣ ಪ್ರದರ್ಶನ ಮತ್ತು ಕೆರಿಯರ್ ಮೇಳದಲ್ಲಿ ಜಿಲ್ಲೆಯ ವಿವಿಧ ಶಾಲೆಯ 1,407ಕ್ಕೂ ಹೆಚ್ಚು ವಿದ್ಯಾರ್ಥಿಗಳು ನೋಂದಣಿಯನ್ನು ಮಾಡಿಕೊಳ್ಳುವ ಮೂಲಕ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು. ಕರಿಯರ್ ಮೇಳದ ಪೋಸ್ಟರ್ ಬಿಡುಗಡೆ ಮಾಡಲಾಯಿತು. ಕರಿಯರ್ ರಥವನ್ನು ಎಳೆಯಲಾಯಿತು.

ಇದಕ್ಕೂ ಮುಂಚೆ ದೇವದುರ್ಗ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಮಲ್ಲಿಕಾರ್ಜುನ ಅವರಿಂದ ಭಾರತ ಸಂವಿಧಾನದ ಪೀಠಿಕೆಯನ್ನು ಬೋಧಿಸಲಾಯಿತು.

ಇದೇ ಸಂದರ್ಭದಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಪ್ರಭಾರಿ ಉಪ ನಿರ್ದೇಶಕರಾದ ಸೋಮಶೇಖರಪ್ಪ ಹೋಕ್ರಾಣಿ, ಡಯಟ್ ಪ್ರಾಂಶುಪಾಲರು ಹಾಗೂ ಅಭಿವೃದ್ಧಿ ಉಪ ನಿರ್ದೇಶಕರಾದ ಚಂದ್ರಶೇಖರ ಭಂಡಾರಿ, ಡಯಟ್ ಹಿರಿಯ ಉಪನ್ಯಾಸಕರಾದ ಶಿವಮ್ಮ, ಶರಣಪ್ಪ ವಟಗಲ್, ಡಯಟ್ ನೋಡಲ್ ಅಧಿಕಾರಿ ಸುಖದೇವ್, ಶಿವಮಣಿ ಸೇರಿದಂತೆ ವಿವಿಧ ಶಾಲಾ ಹಾಗೂ ಕಾಲೇಜಿನ ಶಿಕ್ಷಕರು, ಉಪನ್ಯಾಸರು, ವಿದ್ಯಾರ್ಥಿಗಳು ಇದ್ದರು.

# ಪ್ರಶ್ನೆಗೆ ಉತ್ತರ ಪ್ರಕ್ರಿಯೆ:ನಾಳೆಯಿಂದ ಸುಧಾರಣೆ: ಪರಂ ಭರವಸೆ



**ಬೆಂಗಳೂರು, ಮಾ. 17–** ವಿಧಾನಸಭೆಯಲ್ಲಿ ನಿನ್ನೆ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗೆ ಉತ್ತರ ಬರುತ್ತಿಲ್ಲ ಎಂದು ಸಭಾಧ್ಯಕ್ಷ ಯು.ಟಿ. ಖಾದರ್ ಪೀಠದಿಂದ ಹೊರ ನಡೆದ ಬೆನ್ನಲ್ಲೇ ಸರ್ಕಾರ ಎಚ್ಚೆತ್ತುಕೊಂಡಿದ್ದು, ಸದನದಲ್ಲಿ ಉತ್ತರಿಸುವ ಪ್ರಶ್ನೆಗಳಿಗೆ ಉತ್ತರ ನೀಡುವ ಪ್ರಕ್ರಿಯೆಯನ್ನು ಸುಧಾರಿಸಲಾಗುವುದು. ನಾಳೆಯಿಂದ ಎಲ್ಲವೂ ಸರಿ ಹೋಗಲಿದೆ ಎಂದು ಗೃಹ ಸಚಿವ ಡಾ.ಜಿ. ಪರಮೇಶ್ವರ್ ಹೇಳಿದ ಬೆನ್ನಲ್ಲೆ, ವಿಧಾನಸಭಾಧ್ಯಕ್ಷ ಯು.ಟಿ. ಖಾದರ್, ಯಾವ ಇಲಾಖೆಯಿಂದ ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಪೈಕಿ ಎಷ್ಟು ಉತ್ತರ ಬಂದಿವೆ, ಎಷ್ಟು ಉತ್ತರ ಬಂದಿಲ್ಲ ಎಂಬ ಪಟ್ಟಿಯನ್ನು ಓದಿದರು.

ಪ್ರಶ್ನೋತ್ತರ ಅವಧಿಯ ಸಂದರ್ಭದಲ್ಲಿ ಗೃಹ ಸಚಿವ ಡಾ.ಜಿ. ಪರಮೇಶ್ವರ್ ಸದನದಲ್ಲಿ ಉತ್ತರಿಸಬೇಕಾದ 131 ಪ್ರಶ್ನೆಗಳ ಪೈಕಿ 54 ಪ್ರಶ್ನೆಗಳಿಗೆ ಉತ್ತರ ಒದಗಿಸಲಾಗಿದೆ ಎಂದಾಗ ವಿಪಕ್ಷಗಳು ಇಂದೂ ಸಹ ಹೆಚ್ಚು ಉತ್ತರಗಳು ಬಂದಿಲ್ಲ ಎಂದಾಗ ಗೃಹ ಸಚಿವರು, ಸಭಾಧ್ಯಕ್ಷರು ನಿನ್ನೆ ನಮಗೆ ಸೂಚನೆ ಕೊಟ್ಟಿದ್ದಾರೆ. ಅದರಂತೆ ಮುಖ್ಯಮಂತ್ರಿಗಳು ಸಹ ಎಲ್ಲ ಸಚಿವರುಗಳಿಗೆ ಸೂಚನೆ ಕೊಟ್ಟಿದ್ದಾರೆ. ನಾಳೆಯಿಂದ ಎಲ್ಲ ಸರಿ ಹೋಗುತ್ತದೆ ಸದಸ್ಯರ ಎಲ್ಲರ ಪ್ರಶ್ನೆಗಳಿಗೂ ಉತ್ತರ ಸಿಗಲಿದೆ ಎಂದರು.

ಈ ಹಂತದಲ್ಲಿ ಮಧ್ಯ ಪ್ರವೇಶಿಸಿ ಮಾತನಾಡಿದ ವಿಧಾನಸಭಾಧ್ಯಕ್ಷ ಯು.ಟಿ. ಖಾದರ್, ರೋಗಿಗಳಿಗೆ ಮದ್ದು ನೀಡಿದ ನಂತರ ಆರೋಗ್ಯ ಸುಧಾರಿಸಲು 2-3 ದಿನಗಳು ಬೇಕಾಗುತ್ತದೆ. ಆದೇ ರೀತಿ ನಾವು ನಿನ್ನೆ ಸರ್ಕಾರಕ್ಕೆ ಸೂಚನೆ ಕೊಟ್ಟಿದ್ದೇನೆ. ಎಲ್ಲವೂ ಸರಿ ಹೋಗಬಹುದು. ಎಂದರು.

ಆಗ ಗೃಹ ಸಚಿವರು ಸಂಬಂಧಪಟ್ಟ ಅಧಿಕಾರಿಗಳಿಗೂ ಸೂಚನೆ ನೀಡಲಾಗಿದೆ ಎಂದರು ಗೃಹ ಸಚಿವ ಡಾ.ಜಿ. ಪರಮೇಶ್ವರ್ ನಾಳೆಯಿಂದ ಸದನದಲ್ಲಿ ಉತ್ತರಿಸುವ ಪ್ರಶ್ನೆಗಳಿಗೆ ಸಮರ್ಪಕ ಉತ್ತರಗಳು ಇರಲಿವೆ ಎಂದು ಹೇಳಿದ ನಂತರ ಸಭಾಧ್ಯಕ್ಷರು, ಯಾವ ಇಲಾಖೆಗೆ ಎಷ್ಟು ಪ್ರಶ್ನೆ ಕೇಳಲಾಗಿತ್ತು, ಎಷ್ಟು ಉತ್ತರ ಬಂದಿದೆ ಎಂಬ ಪಟ್ಟಿಯನ್ನು ಓದಿದರು.

ಡಿಪಿಎಆರ್‌ಗೆ 23 ಪ್ರಶ್ನೆ ಕೇಳಲಾಗಿತ್ತು. 6ಕ್ಕೆ ಉತ್ತರ ಬಂದಿದೆ. ಆರ್ಥಿಕ ಇಲಾಖೆಗೆ 33 ಪ್ರಶ್ನೆಗಳನ್ನು ಕೇಳಲಾಗಿತ್ತು. 6ಕ್ಕೆ ಉತ್ತರ ಬಂದಿದೆ. ಪರಿಶಿಷ್ಟ ಜಾತಿ ಪಂಗಡದ ಕಲ್ಯಾಣ ಇಲಾಖೆಗೆ 9 ಪ್ರಶ್ನೆ ಕೇಳಾಗಿತ್ತು 1ಕ್ಕೂ ಉತ್ತರ ಬಂದಿಲ್ಲ. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ 10 ಪ್ರಶ್ನೆಗಳನ್ನು ಕೇಳಲಾಗಿತ್ತು ಒಂದಕ್ಕೂ ಉತ್ತರ ಬಂದಿಲ್ಲ. ಸಹಕಾರ ಇಲಾಖೆಗೆ 12 ಪ್ರಶ್ನೆಗಳನ್ನು ಕಳುಹಿಸಲಾಗಿತ್ತು. ಒಂದಕ್ಕೂ ಉತ್ತರ ಬಂದಿಲ್ಲ.ವಾರ್ತಾ ಇಲಾಖೆಗೆ ಒಂದು ಪ್ರಶ್ನೆ ಕೇಳಲಾಗಿತ್ತು ಒಂದಕ್ಕೆ ಉತ್ತರ ಬಂದಿದೆ. ಜಲ ಸಂಪನ್ಮೂಲ ಇಲಾಖೆಗೆ 33 ಪ್ರಶ್ನೆಗಳನ್ನು ಕೇಳಲಾಗಿತ್ತು ನಾಲ್ಕಕ್ಕೆ ಮಾತ್ರ ಉತ್ತರ ಬಂದಿದೆ. ನಗರಾಭಿವೃದ್ಧಿ ಇಲಾಖೆಗೆ 21 ಪ್ರಶ್ನೆಗಳನ್ನು ಕೇಳಲಾಗಿತ್ತು. 8 ಕ್ಕೆ ಮಾತ್ರ ಉತ್ತರ ಬಂದಿದೆ.

ಗೃಹ ಮತ್ತು ಒಳಾಂಗಣ ಇಲಾಖೆಗೆ 35 ಪ್ರಶ್ನೆ ಕೇಳಲಾಗಿತ್ತು. 26 ಕ್ಕೆ ಉತ್ತರ ಬಂದಿದೆ. ಕಾನೂನು ಇಲಾಖೆಗೆ 5 ಪ್ರಶ್ನೆ ಕೇಳಲಾಗಿತ್ತು. 3 ಕ್ಕೆ ಉತ್ತರ ಬಂದಿದೆ. ಪ್ರವಾಸೋದ್ಯಮ ಇಲಾಖೆಗೆ 25 ಪ್ರಶ್ನೆ ಕೇಳಲಾಗಿತ್ತು. ಒಂದಕ್ಕೆ ಮಾತ್ರ ಉತ್ತರ ಬಂದಿದೆ. ಸಣ್ಣ ನೀರಾವರಿ ಇಲಾಖೆಗೆ 19 ಪ್ರಶ್ನೆ ಕೇಳಲಾಗಿತ್ತು 13 ಪ್ರಶ್ನೆಗಳಿಗೆ ಉತ್ತರ ಬಂದಿದೆ. ಐಟಿಬಿಟಿ ಇಲಾಖೆಗೆ 2 ಪ್ರಶ್ನೆ ಕೇಳಾಗಿತ್ತು 2ಕ್ಕೂ ಉತ್ತರ ಬಂದಿದೆ ಎಂದು ಹೇಳಿದರು.

# ಟಿ.ರಾಘವಾಚಾರ್ಯ ಸ್ಮಾರಕ ದತ್ತಿ ಕಾರ್ಯಕ್ರಮ



**ಬಳ್ಳಾರಿ, ಮಾ.17:** ನಗರದ ಕಪಗಲ್ ರಸ್ತೆಯಲ್ಲಿರುವ ಆಕ್ಸ್‌ಫರ್ಡ್ ಬಿಜಿನೆಸ್ ಕಾಲೇಜ್ ನಲ್ಲಿ ಇಂದು ಬೆಳಗ್ಗೆ 9 ಗಂಟೆಗೆ ನಾಟ್ಯಕಲಾ ಪ್ರಪೂರ್ಣ ಬಳ್ಳಾರಿ ಟಿ ರಾಘವಾಚಾರ್ಯ ಸ್ಮಾರಕ ದತ್ತಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು. ಪ್ರಾರಂಭದಲ್ಲಿ ಪ್ರಾರ್ಥನ ಗೀತೆಯನ್ನು ಶ್ರೀಮತಿ ರೂಪಶ್ರೀ ಕನ್ನಡ ಉಪನ್ಯಾಸಕರು ನೆರವೇರಿಸಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕು ಘಟಕದ ಅಧ್ಯಕ್ಷರಾದ ನಾಗರೆಡ್ಡಿ ಕೆ ವಿ ರವರು ಗಣ್ಯಮಾನ್ಯರನ್ನು ಸ್ವಾಗತಿಸಿ ಪ್ರಸ್ತಾವಿಕ ನುಡಿ ನುಡಿದರು.ರಾಘವ ಮೆಮೋರಿಯಲ್ ಅಸೋಸಿಯೇಷನ್ ನ ಅಧ್ಯಕ್ಷರಾದ ಕೆ. ಕೋಟೇಶ್ವರ ರಾವ್ ಕಾರ್ಯಕ್ರಮವನ್ನು ಉದ್ಘಾಟಿಸಿ ತಮ್ಮ ಉದ್ಘಾಟನಾ ನುಡಿಯಲ್ಲಿ ಇಂತಹ ಮಹನೀಯರ ಕಾರ್ಯಕ್ರಮಗಳು ಶಾಲಾ-ಕಾಲೇಜುಗಳಲ್ಲಿ ನಡೆಯುವುದು ಇಂದಿನ ದಿನಮಾನಗಳಲ್ಲಿ ಔಚಿತ್ಯ ಪೂರ್ಣ ಎಂದು ತಿಳಿಸಿದರು.

ನಿವೃತ್ತ ಉಪನ್ಯಾಸಕರಾದ ಎನ್ ಬಸವರಾಜ ರವರು ಬಳ್ಳಾರಿ ರಾಘವ ರವರು ರಂಗ ಕಲೆಗೆ ಕೊಟ್ಟ ಕೊಡುಗೆಯ ಬಗ್ಗೆ ಉಪನ್ಯಾಸ ನೀಡಿದರು ಇವರು ತಮ್ಮ ಉಪನ್ಯಾಸದಲ್ಲಿ ಬಳ್ಳಾರಿ ರಾಘವ ರವರು ಗಾಂಧೀಜಿಯವರ ಮನಸ್ಸನ್ನು ತಮ್ಮ ನಟನೆಯಿಂದ ಗೆದ್ದಿದ್ದರು. ಹಣಕ್ಕೆ ಪ್ರಾಮುಖ್ಯತೆ ಕೊಡದೆ ಮಾನವೀಯ ಮೌಲ್ಯಗಳಿಗೆ ಪ್ರಾಮುಖ್ಯತೆ ಕೊಡುವ ವಿಶೇಷ ಗುಣ ಇವರದಾಗಿತ್ತು. ಲಾರ್ಡ್ ಬರ್ನಾಲ್ಡ್ ಶಾ ರವರು ಬಳ್ಳಾರಿ ರಾಘವ ರವರ ನಟನೆಗೆ ಮಾರುಹೋಗಿದ್ದರು. ಜಾತ್ಯಾತೀತ ಮನೋಭಾವ ಇವರಲ್ಲಿ ಎದ್ದು ಕಾಣುತ್ತಿತ್ತು. ಸಮರ್ಥ ನ್ಯಾಯವಾದಿಗಳು ಆಗಿದ್ದರು ಎಂದು ತಮ್ಮ ಉಪನ್ಯಾಸದಲ್ಲಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ರಾಘವ ಮೆಮೋರಿಯಲ್ ಅಸೋಸಿಯೇಷನ್ ನ ಗೌರವ ಕಾರ್ಯದರ್ಶಿಗಳಾದ ಎನ್ ಪ್ರಕಾಶ್, ಗೌರವಾಧ್ಯಕ್ಷರಾದ ಕೆ ಚೆನ್ನಪ್ಪ, ರಮಣಪ್ಪ ಹಾಗೂ ಬಾಣಪುರ ರಮೇಶ್ ಗೌಡ ಉಪಸ್ಥಿತರಿದ್ದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಐಡಿಪಿಎಸ್ ಪದವಿಪೂರ್ವ ಕಾಲೇಜಿನ ಪ್ರಾಚಾರ್ಯರಾದ ತಿಪ್ಪಾರೆಡ್ಡಿ ರವರು ತಮ್ಮ ಮುಖ್ಯ ಅತಿಥಿಗಳ ನುಡಿಯಲ್ಲಿ ಬಳ್ಳಾರಿ ರಾಘವ ರವರು ನಾಟಕ ರಂಗಕ್ಕೆ ಅಮೂಲ್ಯವಾದ ಕೊಡುಗೆಯನ್ನು ಕೊಟ್ಟಿದ್ದಾರೆ ಅವರು ಬೆಳೆದು ಬಂದ ದಾರಿಯಲ್ಲಿ ನಾವು ನೀವೆಲ್ಲರೂ ಸಾಗೋಣ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಆಕ್ಸ್‌ಫರ್ಡ್ ಬಿಜಿನೆಸ್ ಕಾಲೇಜಿನ ಪ್ರಾಚಾರ್ಯರಾದ ಶ್ರೀಯುತ ದಿನೇಶ್ ರಾಜ್.ಎಸ್ ರವರು ತಮ್ಮ ಅಧ್ಯಕ್ಷೀಯ ನುಡಿಯಲ್ಲಿ ಗಡಿಭಾಗದಲ್ಲಿ ಇಂತಹ ಕಾರ್ಯಕ್ರಮಗಳು ಆಗಿಂದಾಗೆ ಆಯೋಜಿಸಿದಾಗ ಕನ್ನಡದ ಬಗ್ಗೆ ಪ್ರೀತಿ ಕಾಳಜಿ, ಗೌರವ ಬರಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಕೊನೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ತಾಲೂಕು ಘಟಕದ ವತಿಯಿಂದ ಗಣ್ಯಮಾನ್ಯರನ್ನು ಗೌರವಿಸಲಾಯಿತು . ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿಗಳಾದ ಬಿ ಹನುಮಂತರಾವ್ ಕೊನೆಗೆ ವಂದಿಸಿದರು.

# ಗ್ರಾಮಗಳ ಅಭಿವೃದ್ಧಿಗೆ ನಿರಂತರವಾಗಿ ಶ್ರಮಿಸುತ್ತೇನೆ :ಡಾ. ಶೈಲೇಂದ್ರ ಬೆಲ್ದಾಳೆ



**ಬೀದರ್:ಮಾ.17:** ಗ್ರಾಮದ ಜನರು ಸಾಮಾಜಿಕ, ಧಾರ್ಮಿಕ ಹಾಗೂ ಸಾರ್ವಜನಿಕ ಕಾರ್ಯಕ್ರಮಗಳನ್ನು ನಡೆಸಲು ಒಂದು ಸೂಕ್ತ ಸ್ಥಳದ ಅಗತ್ಯವಿತ್ತು. ಅದನ್ನು ಮನಗಂಡು ಇಲ್ಲಿ ಸಮುದಾಯ ಭವನ ನಿರ್ಮಾಣ ಮಾಡುವ ಕೆಲಸಕ್ಕೆ ಇಂದು ಗುದ್ದಲಿ ಪೂಜೆ ನೆರವೇರಿಸಲಾಗಿದೆ ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರು ಹೇಳಿದರು.

ಬೀದರ್ ದಕ್ಷಿಣ ಕ್ಷೇತ್ರದ ಕೋಳಾರ (ಕೆ) ಗ್ರಾಮದಲ್ಲಿರುವ ಶ್ರೀ ಬೀರಲಿಂಗೇಶ್ವರ ದೇವಸ್ಥಾನದ ಸಮೀಪ ?10 ಲಕ್ಷ ರೂ. ವೆಚ್ಚದಲ್ಲಿ ನಿರ್ಮಾಣವಾಗಲಿರುವ ಸಮುದಾಯ ಭವನದ ಕಾಮಗಾರಿಗೆ ಇಂದು ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದರು.
ಗ್ರಾಮಸ್ಥರ ಸಾಮಾಜಿಕ, ಧಾರ್ಮಿಕ ಹಾಗೂ ಸಾರ್ವಜನಿಕ ಕಾರ್ಯಕ್ರಮಗಳಿಗೆ ಈ ಸಮುದಾಯ ಭವನವು ಬಹಳ ಉಪಯುಕ್ತವಾಗಲಿದ್ದು, ಗ್ರಾಮದ ಅಭಿವೃದ್ಧಿಗೆ ಇದು ಮತ್ತೊಂದು ಮಹತ್ವದ ಹೆಜ್ಜೆಯಾಗಿದೆ

ಈ ಸಂದರ್ಭದಲ್ಲಿ ಗ್ರಾಮಸ್ಥರು ಕುರಿ ಮರಿ ಉಡುಗೊರೆಯಾಗಿ ನೀಡಿ, ಕಂಬಳಿಯಿಂದ ಸನ್ಮಾನಿಸಿ ಗೌರವಿಸಿದುದು ನನಗೆ ಅಪಾರ ಸಂತೋಷ ತಂದಿತು.ಈ ಭವನವು ಗ್ರಾಮಸ್ಥರ ಎಲ್ಲ ಕಾರ್ಯಕ್ರಮಗಳಿಗೆ ಉಪಯುಕ್ತವಾಗಿದ್ದು, ಗ್ರಾಮದ ಒಗ್ಗಟ್ಟನ್ನು ಮತ್ತಷ್ಟು ಬಲಪಡಿಸುತ್ತದೆ.
ಕಾಮಗಾರಿಯನ್ನು ಶೀಘ್ರವಾಗಿ ಹಾಗೂ ಉತ್ತಮ ಗುಣಮಟ್ಟದಲ್ಲಿ ಪೂರ್ಣಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಹಾಗೂ ಗುತ್ತಿಗೆದಾರರಿಗೆ ಸೂಚನೆ ನೀಡಿದ್ದೇನೆ. ಈ ಸಮುದಾಯ ಭವನ ಗ್ರಾಮಾಭಿವೃದ್ಧಿಗೆ ಸಹಕಾರಿಯಾಗಲಿ ಮತ್ತು ಎಲ್ಲರಿಗೂ ಉಪಯೋಗವಾಗಲಿ ಎಂದು ಶ್ರೀ ಬೀರಲಿಂಗೇಶ್ವರ ದೇವರಲ್ಲಿ ಪ್ರಾರ್ಥಿಸುತ್ತೇನೆ.
ಈ ಭವನವು ಗ್ರಾಮಸ್ಥರ ಎಲ್ಲ ಕಾರ್ಯಕ್ರಮಗಳಿಗೆ ಉಪಯುಕ್ತವಾಗಿದ್ದು, ಗ್ರಾಮದ ಒಗ್ಗಟ್ಟನ್ನು ಮತ್ತಷ್ಟು ಬಲಪಡಿಸುತ್ತದೆ.

ನಮ್ಮ ಬೀದರ್ ದಕ್ಷಿಣ ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಮೂಲ ಸೌಕರ್ಯಗಳ ಅಭಿವೃದ್ಧಿಗೆ ವಿಶೇಷ ಒತ್ತು ನೀಡಲಾಗಿದೆ. ರಸ್ತೆ, ಕುಡಿಯುವ ನೀರು, ವಿದ್ಯುತ್, ಆರೋಗ್ಯ ಹಾಗೂ ಶಿಕ್ಷಣದಂತಹ ಅಗತ್ಯ ಸೌಲಭ್ಯಗಳ ಜೊತೆಗೆ ಗ್ರಾಮಸ್ಥರ ಸಾಮಾಜಿಕ ಹಾಗೂ ಸಾರ್ವಜನಿಕ ಕಾರ್ಯಕ್ರಮಗಳಿಗೆ ಅನುಕೂಲವಾಗುವಂತೆ ಸಮುದಾಯ ಭವನಗಳ ನಿರ್ಮಾಣಕ್ಕೂ ಹೆಚ್ಚಿನ ಪ್ರಾಮುಖ್ಯತೆ ನೀಡಲಾಗುತ್ತಿದೆ.
ಸಮುದಾಯ ಭವನಗಳು ಗ್ರಾಮಸ್ಥರ ಸಭೆಗಳು, ಧಾರ್ಮಿಕ ಕಾರ್ಯಕ್ರಮಗಳು, ಸಾಮಾಜಿಕ ಸಮಾರಂಭಗಳು ಹಾಗೂ ವಿವಿಧ ಜನಪರ ಚಟುವಟಿಕೆಗಳಿಗೆ ಒಂದು ಸಾಮಾನ್ಯ ವೇದಿಕೆಯಾಗಿ ಕಾರ್ಯನಿರ್ವಹಿಸುತ್ತವೆ. ಇದರಿಂದ ಗ್ರಾಮದಲ್ಲಿ ಒಗ್ಗಟ್ಟು, ಸಹಕಾರ ಮತ್ತು ಸಮಗ್ರ ಅಭಿವೃದ್ಧಿಗೆ ಉತ್ತೇಜನ ಸಿಗುತ್ತದೆ.
ಮುಂದಿನ ದಿನಗಳಲ್ಲಿಯೂ ಕ್ಷೇತ್ರದ ಇನ್ನಷ್ಟು ಗ್ರಾಮಗಳಲ್ಲಿ ಮೂಲ ಸೌಕರ್ಯಗಳನ್ನು ಅಭಿವೃದ್ಧಿಪಡಿಸುವ ಜೊತೆಗೆ ಸಮುದಾಯ ಭವನ ನಿರ್ಮಾಣ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವ ಮೂಲಕ ಗ್ರಾಮಗಳ ಅಭಿವೃದ್ಧಿಗೆ ನಿರಂತರವಾಗಿ ಶ್ರಮಿಸುತ್ತೇನೆ ಎಂದರು.
ಈ ಸಂದರ್ಭದಲ್ಲಿ ಮುಖಂಡರಾದ ಬಾಬುರಾವ ಮಲ್ಕಾಪುರ, ಪರಿಹಾರ ಮಲ್ಲಿಕಾರ್ಜುನ, ಪೀರಪ್ಪ ಯರನಳ್ಳಿ,ಪ್ರಕಾಶ ಶಂಭು, ಸಂತೋಷ ಶಂಭು, ವಿಜಯಕುಮಾರ ಪಾಟೀಲ, ಪ್ರಶಾಂತ ಶರಗುರ, ಶಿವಾನಂದ ಕುಂಬಾರ, ಬೀಮಣ್ಣಾ, ಸಂತೋಷ ಬೀರಗಿ, ಯೋಗೇಶ, ಪ್ರೇಮ, ಅಮರ ಮತ್ತಿತರರು ಉಪಸ್ಥಿತರಿದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ಸ್ಮಶಾನ ಭೂಮಿ ಕೊರತೆಯ ಬಗ್ಗೆ ಅಧಿವೇಶನದಲ್ಲಿ ಧ್ವನಿ ಎತ್ತಿದ ಶಾಸಕ ಚವ್ಹಾಣತಾಲೂಕಿನ ಎಲ್ಲ ಗ್ರಾಮ, ತಾಂಡಾಗಳಿಗೆ ಸ್ಮಶಾನ ಭೂಮಿ ಒದಗಿಸಿ

**ಔರಾದ್ :ಮಾ.17:** ತಾಲ್ಲೂಕಿನ ಎಲ್ಲ ಗ್ರಾಮ ಮತ್ತು ತಾಂಡಾಗಳಿಗೆ ಸ್ಮಶಾನ ಭೂಮಿಯನ್ನು ಕಲ್ಪಿಸಬೇಕೆಂದು ಶಾಸಕ ಪ್ರಭು.ಬಿ ಚವ್ಹಾಣ ಅವರು ಸರ್ಕಾರವನ್ನು ಆಗ್ರಹಿಸಿದರು.

ಬೆಂಗಳೂರಿನಲ್ಲಿ ನಡೆಯುತ್ತಿರುವ ವಿಧಾನಸಭೆಯ ಬಜೆಟ್ ಅಧಿವೇಶನದಲ್ಲಿ ಶಾಸಕರು ಚುಕ್ಕೆಗುರುತಿನ ಪ್ರಶ್ನೆ ಕೇಳಿದರು. ಔರಾದ(ಬಿ) ಕ್ಷೇತ್ರದಲ್ಲಿ 154 ಗ್ರಾಮಗಳು 157 ತಾಂಡಾಗಳಿವೆ. ಕೆಲವು ಗ್ರಾಮ ಮತ್ತು ತಾಂಡಾಗಳಿಗೆ ಇಂದಿಗೂ ಸ್ಮಶಾನಭೂಮಿಯಿಲ್ಲ. ನಾನು ಪ್ರತಿ ವರ್ಷ ಗ್ರಾಮ ಸಂಚಾರ ಮಾಡುವ ವೇಳೆ ಬಹಳಷ್ಟು ಊರುಗಳಲ್ಲಿ ಸ್ಮಶಾನಭೂಮಿ ಬಗ್ಗೆ ಮನವಿಗಳು ಬರುತ್ತವೆ. ಹಿಂದೆ ಗಣೇಶಪೂರ(ಯು) ಮತ್ತು ಲಿಂಗಿ ಗ್ರಾಮಗಳಲ್ಲಿ ರಸ್ತೆಯ ಮೇಲೆಯೇ ಅಂತಿಮ ಸಂಸ್ಕಾರ ನಡೆಸಲಾಗಿದೆ. ಸಾಕಷ್ಟು ಗಲಾಟೆಗಳು, ಪ್ರಕರಣಗಳು ದಾಖಲಾಗಿವೆ ಎಂದು ಸದನಕ್ಕೆ ವಿಷಯದ ಗಂಭೀರತೆಯ ಬಗ್ಗೆ ಮನವರಿಕೆ ಮಾಡಿಕೊಟ್ಟರು.

ಸರ್ಕಾರಿ ಜಮೀನು ಲಭ್ಯವಿರುವ ಕಡೆ ಕೂಡಲೇ ಸ್ಮಶಾನಕ್ಕಾಗಿ ಭೂಮಿ ಕಾಯ್ದಿರಿಸುವ ಕೆಲಸವಾಗಬೇಕು. ಜಮೀನಿಲ್ಲದ ಕಡೆ ಖಾಸಗಿಯವರಿಂದ ಖರೀದಿಸಲು ವ್ಯವಸ್ಥೆ ಮಾಡಬೇಕು. ಎಲ್ಲ ಗ್ರಾಮ ಮತ್ತು ತಾಂಡಾಗಳಿಗೆ ಸ್ಮಶಾನಭೂಮಿ ಕಲ್ಪಿಸುವ ಜೊತೆಗೆ ಅವುಗಳಿಗೆ ರಸ್ತೆ, ಚಿತಾಗಾರ, ಕಾಂಪೌಂಡ್, ವಿದ್ಯುತ್, ಕುಡಿಯುವ ನೀರು ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸಬೇಕೆಂದು ಆಗ್ರಹಿಸಿದರು.

ಶಾಸಕರ ಪ್ರಶ್ನೆಗೆ ಉತ್ತರಿಸಿದ ಕಂದಾಯ ಸಚಿವರಾದ ಕೃಷ್ಣಭೈರೇಗೌಡ ಅವರು, ಗ್ರಾಮ , ತಾಂಡಾ ಸೇರಿದಂತೆ ಎಲ್ಲ ವಸತಿ ಪ್ರದೇಶಗಳಿಗೆ ಅವಶ್ಯಕ ಸ್ಮಶಾನಭೂಮಿ ಮಾಡಬೇಕೆಂದು ಕಳೆದ 10 ವರ್ಷಗಳಿಂದ ಎಲ್ಲ ಸರ್ಕಾರಗಳಿಂದ ಪ್ರಯತ್ನಗಳು ನಡೆದಿವೆ. ಹೈಕೋರ್ಟ್ ಕೂಡ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿದೆ. ಆದರೂ ಕೆಲವು ಗ್ರಾಮಗಳಿಗೆ ಇಂದಿಗೂ ಸ್ಮಶಾನಭೂಮಿ ಕೊಡಲು ಸಾಧ್ಯವಾಗದೇ ಇರುವುದು ಬೇಸರದ ಸಂಗತಿ ಎಂದರು.

ಲಭ್ಯವಿರುವ ಸರ್ಕಾರಿ ಜಮೀನನ್ನು ರೈತರು ಹಾಗೂ ಅನ್ಯ ವಿಷಯಗಳಿಗೆ ಕೊಡುವ ಕಾರಣ ಸ್ಮಶಾನಭೂಮಿಗೆ ಜಮೀನು ಇಲ್ಲದಂತಾಗಿದೆ. ಸ್ಮಶಾನಭೂಮಿಯಿಲ್ಲದ ಗ್ರಾಮಗಳಲ್ಲಿ ಖಾಸಗಿಯವರಿಂದ ಮಾರ್ಗಸೂಚಿ ದರಕ್ಕಿಂತ ಮೂರು ಪಟ್ಟು ಹಣ ನೀಡಿ ಖಾಸಗಿ ಜಮೀನು ಖರೀದಿಸಲಾಗುತ್ತದೆ. ಕಳೆದ ಮೂರು ವರ್ಷದಲ್ಲಿ ರಾಜ್ಯದಲ್ಲಿ ಸ್ಮಶಾನಭೂಮಿಗಳ ಖರೀದಿಗೆ 58 ಕೋಟಿ ಖರ್ಚು ಮಾಡಲಾಗಿದೆ ಎಂದರು.

ಔರಾದ(ಬಿ) ಕ್ಷೇತ್ರದಲ್ಲಿ 154 ವಸತಿ ಪ್ರದೇಶಗಳ ಪೈಕಿ 9 ಪ್ರದೇಶಗಳಲ್ಲಿ ಸ್ಮಶಾನಭೂಮಿ ಇಲ್ಲವೆಂದು ಮಾಹಿತಿ ಬಂದಿದೆ. ಈ ಪೈಕಿ ಎರಡು ಗ್ರಾಮಗಳಲ್ಲಿ ಸರ್ಕಾರಿ ಜಮೀನಿದ್ದು, ವಾರದೊಳಗಾಗಿ ಸ್ಮಶಾನಕ್ಕೆ ಕಾಯ್ದಿರಿಸುವಂತೆ ಜಿಲ್ಲಾಧಿಕಾರಿಗಳಿಗೆ ಆದೇಶಿಸಲಾಗಿದೆ. ಉಳಿದೆಡೆ ಪಕ್ಕದ ಊರುಗಳಲ್ಲಿ ಜಮೀನು ಕಾಯ್ದಿರಿಸಲು 15 ದಿನಗಳಲ್ಲಿ ವ್ಯವಸ್ಥೆ ಮಾಡಲಾಗುತ್ತದೆ. ಎಲ್ಲ ಗ್ರಾಮಗಳಿಗೆ ಕನಿಷ್ಠ ಸ್ಮಶಾನಭೂಮಿ ಸೌಲಭ್ಯ ಇರಬೇಕು ಎಂಬ ಉದ್ದೇಶ ಹೊಂದಿದ್ದು, ಒಂದು ವೇಳೆ ಇದಕ್ಕೆ ಒಪ್ಪದೇ ಇದ್ದಲ್ಲಿ ಸ್ಥಳೀಯವಾಗಿ ಖಾಸಗಿಯವರು ಮಾರಾಟಕ್ಕೆ ಸಿದ್ದರಿದಲ್ಲಿ ಅಂತಹ ಪ್ರಸ್ತಾವನೆಗಳನ್ನು ಸಲ್ಲಿಸುವಂತೆ ಜಿಲ್ಲಾಧಿಕಾರಿಯವರಿಗೆ ಸೂಚಿಸಲಾಗುತ್ತದೆ ಎಂದರು. ಇದಲ್ಲದೇ ಸಾರ್ವಜನಿಕ ಸ್ಮಶಾನಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಗ್ರಾಮ ಪಂಚಾಯಿತಿಯ ಮೂಲಕ ಕ್ರಮ ವಹಿಸಲಾಗುವುದೆಂದು ಭರವಸೆ ನೀಡಿದರು.

ಸ್ಮಶಾನಭೂಮಿ ಕೊರತೆಯ ಬಗ್ಗೆ ಅಧಿವೇಶನದಲ್ಲಿ ಸವಿಸ್ತಾರ ಚರ್ಚೆ ನಡೆಯಿತು. ವಿರೋಧ ಪಕ್ಷದ ನಾಯಕರಾದ ಆರ್ ಅಶೋಕ ಅವರು ಮಾತನಾಡಿ, ರಾಜ್ಯದಲ್ಲಿ ಸ್ಮಶಾನಭೂಮಿಗೆ 58 ಕೋಟಿ ಖರ್ಚು ಮಾಡಲಾಗಿದೆ ಎಂದು ತಿಳಿಸಲಾಗಿದೆ. ಆದರೆ ಎಲ್ಲ ತಾಲ್ಲೂಕುಗಳಿಗೆ ಇದು ಸಾಲುವುದಿಲ್ಲ. ಅನ್ಯ ವಿಷಯಗಳಿಗೆ ಸರ್ಕಾರಿ ಜಮೀನು ಕೊಡುವುದರಿಂದ ಸ್ಮಶಾನಕ್ಕೆ ಜಾಗ ಇಲ್ಲದಂತಾಗಿದೆ. ಶಾಲೆ, ಅಂಗನವಾಡಿ ಮತ್ತು ಸ್ಮಶಾನಭೂಮಿಗಳಿಗೆ ಮೊದಲು ಆದ್ಯತೆ ನೀಡಿ ನಂತರ ಅನ್ಯ ಕಾರ್ಯಕ್ಕೆ ಮಂಜೂರು ಮಾಡುವಂತೆ ಕಟ್ಟುನಿಟ್ಟಿನ ಆದೇಶಗಳನ್ನು ಹೊರಡಿಸಬೇಕು ಎಂದು ಸರ್ಕಾರವನ್ನು



ಒತ್ತಾಯಿಸಿದರು. ಎಲ್ಲ ತಾಂಡಾಗಳು ಕಂದಾಯ ಗ್ರಾಮಗಳಾಗಲಿ

ಬೀದರ ಜಿಲ್ಲೆಯಲ್ಲಿ ಹೆಚ್ಚು ತಾಂಡಾಗಳಿದ್ದು, ಔರಾದ ಕ್ಷೇತ್ರದಲ್ಲಿ 157 ತಾಂಡಾಗಳಿವೆ. ಈ ಪೈಕಿ 30 ತಾಂಡಾಗಳನ್ನು ಕಂದಾಯ ಗ್ರಾಮಗಳನ್ನಾಗಿ ಮಾಡಲಾಗಿದೆ. ಉಳಿದೆಲ್ಲ ತಾಂಡಾಗಳನ್ನು ಮಾನದಂಡಗಳ ಅನ್ವಯ ಕಂದಾಯ ಗ್ರಾಮಗಳನ್ನಾಗಿ ಮಾಡಬೇಕು ಮತ್ತು ಹಾಗೆಯೇ ಗೋಮಾಳ ಸೇರಿದಂತೆ ಸರ್ಕಾರದ ಜಮೀನುಗಳ ಅತಿಕ್ರಮಣವನ್ನು ನಿಯಂತ್ರಿಸಬೇಕು ಎಂದು ಶಾಸಕರಾದ ಪ್ರಭು ಚವ್ಹಾಣ ಅವರು ಆಗ್ರಹಿಸಿದರು. ತಾಂಡಾಗಳ ಪಟ್ಟಿ ಒದಗಿಸಿದಲ್ಲಿ ಅಗತ್ಯ ಕ್ರಮ ವಹಿಸಲಾಗುವುದೆಂದು ಸಚಿವರು ತಿಳಿಸಿದರು.

# ಪಾಕ್ ದಾಳಿಗೆ 400 ಬಲಿ



**ಕಾಬೂಲ್,ಮಾ.17–** ಆಫ್ಘಾನಿಸ್ತಾನದ ಆಸ್ಪತ್ರೆಗಳ ಮೇಲೆ ದಾಳಿ ನಡೆಸಿ ನೂರಾರು ಜನರನ್ನು ಪಾಕಿಸ್ತಾನ ಹತ್ಯೆ ಮಾಡಿದ್ದು ಸಾವಿನ ಸಂಖ್ಯೆ ಕನಿಷ್ಠ 400 ತಲುಪಿದೆ ಎಂದು ತಾಲಿಬಾನ್ ಸರ್ಕಾರದ ಮಾಹಿತಿ ನೀಡಿದೆ.

ಆಫ್ಘಾನಿಸ್ತಾನದ ರಾಜಧಾನಿ ಕಾಬೂಲ್‌ನಲ್ಲಿರುವ ಔಷಧ ಚಿಕಿತ್ಸಾ ಕೇಂದ್ರದಲ್ಲಿ ಪಾಕಿಸ್ತಾನ ನಡೆಸಿದ ದಾಳಿಯಲ್ಲಿ ನೂರಾರು ಸಾವು-ನೋವುಗಳು ಸಂಭವಿಸಿವೆ ಎಂದು ಹೇಳಲಾಗಿದ್ದು ಈವರೆಗೆ ಸುಮಾರು 2,000 ಜನರಿಗೆ ಅಲ್ಲಿ ಚಿಕಿತ್ಸೆ ಕೊಡಿಸಲಾಗುತ್ತಿದೆ ಎಂದು ಆಫ್ಘಾನಿಸ್ತಾನದ ಆರೋಗ್ಯ ಸಚಿವಾಲಯ ಮಾಹಿತಿ ನೀಡಿದೆ.
ಕಾಬೂಲ್‌ನಲ್ಲಿರುವ ಆಸ್ಪತ್ರೆಯ ಮೇಲೆ ದಾಳಿ ನಡೆದಿದ್ದು, ಕೆಲವು ಜನರು ಸಾವನ್ನಪ್ಪಿದ್ದಾರೆ ಮತ್ತು ಇತರರು ಗಾಯಗೊಂಡಿದ್ದಾರೆ ಎಂದು ಆಫ್ಘಾನಿಸ್ತಾನ ಸರ್ಕಾರದ ವಕ್ತಾರರು ಮಾಹಿತಿ ನೀಡಿದ್ದಾರೆ.
ಕಾಬೂಲ್ ಮತ್ತು ಪೂರ್ವ ಪ್ರಾಂತ್ಯದ ನಂಗಾಹಾರ್‌ನಲ್ಲಿರುವ "ಮಿಲಿಟರಿ ಸ್ಥಾಪನೆಗಳು ಮತ್ತು ಭಯೋತ್ಪಾದಕ ಬೆಂಬಲ ಮೂಲಸೌಕರ್ಯಗಳನ್ನು ನಿಖರವಾಗಿ ಗುರಿಯಾಗಿಸಿಕೊಂಡು ದಾಳಿ ಮಾಡಿದೆ ಎನ್ನುವ ಆರೋಪವನ್ನು ಪಾಕಿಸ್ತಾನ ಸಾರಾಸಗಟಾಗಿ ತಿರಸ್ಕರಿಸಿದೆ.

ಸರ್ಕಾರದ ವಕ್ತಾರ ಶರಫತ್ ಜಮಾನ್ ಅಮರ್ಖೈಲ್ ಪ್ರತಿಕ್ರಿಯಿಸಿ ಆಸ್ಪತ್ರೆಯ ಬಳಿ ಯಾವುದೇ ಮಿಲಿಟರಿ ಸೌಲಭ್ಯಗಳಿಲ್ಲ , ಆದರೂ ಪಾಕಿಸ್ತಾನ ದಾಳಿ ನಡೆಸಿ ಅಮಾಯಕ ಜನರನ್ನು ಹತ್ಯೆ ಮಾಡಿದೆ ಎಂದು ಆರೋಪಿಸಿದ್ದಾರೆ.
ಕಾಬೂಲ್‌ನಾದ್ಯಂತ ದೊಡ್ಡ ಸ್ಫೋಟಗಳ ಶಬ್ದ ಕೇಳಿಬಂದಿದೆ, ನಂತರ ವಿಮಾನ ಮತ್ತು ವಾಯು ರಕ್ಷಣಾ ವ್ಯವಸ್ಥೆಗಳ ಶಬ್ದ ಕೇಳಿಬಂದಿದೆ. ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವವರ ಕುಟುಂಬ ಸದಸ್ಯರು ಹೊರಗೆ ಜಮಾಯಿಸಿದ್ದು, ಆಸ್ಪತ್ರೆಯ ಮುಂಭಾಗದಲ್ಲಿ ಟೆಂಟ್‌ಗಳನ್ನು ಹಾಕಿಕೊಂಡು ಗಾಯಗೊಂಡ ರೋಗಿಗಳ ಸಂಬಂಧಿಕರು ಕಾಲ ಕಳೆಯುವ ಸ್ಥಿತಿ ನಿರ್ಮಾಣವಾಗಿದೆ.

ಅಫ್ಘಾನಿಸ್ತಾನ ಸರ್ಕಾರ ಮಾಡಿರುವ ಆರೋಪಗಳನ್ನು ಪಾಕಿಸ್ತಾನ ತಳ್ಳಿ ಹಾಕಿದ್ದು ಇದು ಸುಳ್ಳಿನಿಂದ ಕೂಡಿದ ಮಾಹಿತಿ ಎಂದು ಹೇಳಿದೆ. ಗಡಿಯಾಚೆಗಿನ ಭಯೋತ್ಪಾದನೆಗೆ ಕಾನೂನುಬಾಹಿರ ಬೆಂಬಲ ಒಳಗೊಂಡಿರುವ ಆಫ್ಘಾನಿಸ್ತಾನದ ತಾಲಿಬಾನ್ ಸರ್ಕಾರ ವಿನಾಕಾರಣ ಆರೋಪ ಮಾಡುತ್ತಿದೆ ಎಂದಿದೆ.
ನೆರೆಯ ರಾಷ್ಟಗಳ ನಡುವೆ ನಡೆಯುತ್ತಿರುವ ಸಂಘರ್ಷ ಫೆಬ್ರವರಿಯಲ್ಲಿ ಮತ್ತೆ ಭುಗಿಲೆದ್ದಿದೆ. ಅಫ್ಘಾನಿಸ್ತಾನವು ಉಗ್ರಗಾಮಿ ಗುಂಪುಗಳಿಗೆ ಆಶ್ರಯ ನೀಡುತ್ತಿದೆ ಎಂದು ಪಾಕಿಸ್ತಾನ ಆರೋಪಿಸಿದ್ದು ಇದನ್ನು ತಾಲಿಬಾನ್ ಸರ್ಕಾರ ನಿರಾಕರಿಸಿದೆ.
ಫೆಬ್ರವರಿ 26 ರಿಂದ ಆಫ್ಘಾನಿಸ್ತಾನದಲ್ಲಿ ನಡೆಯುತ್ತಿರುವ ಗಡಿಯಾಚೆಗಿನ ಹೋರಾಟದ ಪರಿಣಾಮವಾಗಿ ಕನಿಷ್ಠ 75 ಜನರು ಸಾವನ್ನಪ್ಪಿದ್ದಾರೆ ಮತ್ತು 193 ಜನರು ಗಾಯಗೊಂಡಿದ್ದಾರೆ ಎಂದು ಅಫ್ಘಾನಿಸ್ತಾನದಲ್ಲಿ ವಿಶ್ವಸಂಸ್ಥೆಯ ಸಹಾಯ ಮಿಷನ್ ತಿಳಿಸಿದೆ.

**ಪಾಕ್ ದಾಳಿ ಭಾರತ ಖಂಡನೆ**–ಅಫ್ಘಾನಿಸ್ತಾನ ರಾಜಧಾನಿ ಕಾಬೂಲ್‌ನಲ್ಲಿರುವ ಆಸ್ಪತ್ರೆಯ ಮೇಲೆ ಪಾಕಿಸ್ತಾನ ನಡೆಸಿದ ವೈಮಾನಿಕ ದಾಳಿಯನ್ನು ಭಾರತ ಖಂಡಿಸಿ ಇದು ಅನಾಗರಿಕ ಹಾಗೂ ಹೇಡಿತನದ ಕೃತ್ಯ ಎಂದು ಕಿಡಿಕಾರಿದೆ.
ಆಸ್ಪತ್ರೆಯ ಮೇಲಿನ ದಾಳಿಯು ಪಾಕಿಸ್ತಾನದ ಘೋರ ಆಕ್ರಮಣಕಾರಿ ಕೃತ್ಯ. ಅಫ್ಘಾನಿಸ್ತಾನದ ಸಾರ್ವಭೌಮತ್ವದ ಮೇಲಿನ ದಾಳಿ. ಪ್ರಾದೇಶಿಕ ಶಾಂತಿ ಮತ್ತು ಸ್ಥಿರತೆಗೆ ಬೆದರಿಕೆ ಎಂದು ವಿದೇಶಾಂಗ ಸಚಿವಾಲಯ ಆಕ್ರೋಶ ಹೊರಹಾಕಿದೆ.
ಪ್ರಪಂಚದಾದ್ಯಂತ ಮುಸ್ಲಿಂ ಸಮುದಾಯಗಳಲ್ಲಿ ಶಾಂತಿ, ಆತ್ಮಾವಲೋಕನ ಮತ್ತು ಕರುಣೆಯ ಸಂದರ್ಭವಾದ ಪವಿತ್ರ ರಂಜಾನ್ ತಿಂಗಳಲ್ಲಿ ಈ ದಾಳಿ ನಡೆದಿರುವುದು ಖಂಡನೀಯ. ಆಸ್ಪತ್ರೆ ಮತ್ತು ಅದರ ರೋಗಿಗಳನ್ನು ಉದ್ದೇಶಪೂರ್ವಕವಾಗಿ ಗುರಿಯಾಗಿಸಿಕೊಳ್ಳುವುದನ್ನು ಸಮರ್ಥಿಸುವ ನೈತಿಕತೆ ಅವರಿಗಿಲ್ಲ ಎಂದು ಹೇಳಿದೆ.

# ಸಿರವಾರ: ಎಸ್‌ಎಸ್‌ಎಲ್‌ಸಿ ಬಡ ವಿದ್ಯಾರ್ಥಿಗಳಿಗೆ ಪರೀಕ್ಷಾ ಸಾಮಗ್ರಿ ಕಿಟ್ ವಿತರಣೆ:ಎಸ್. ಡಿ. ಎಂ. ಸಿ ಅಧ್ಯಕ್ಷರಾದ ಎಂ.ಡಿ. ಹಬೀಬ್







ಧೈರ್ಯದ ದಾರಿ

**ಸಿರವಾರ:** ಪಟ್ಟಣದ ಸರ್ಕಾರಿ ಉರ್ದು ಪ್ರೌಢಶಾಲೆಯಲ್ಲಿ ಮುಂಬರುವ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯನ್ನು ಗಮನದಲ್ಲಿಟ್ಟುಕೊಂಡು, ಬಡ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಶಾಲಾ ಅಭಿವೃದ್ಧಿ ಮತ್ತು ಉಸ್ತುವಾರಿ ಸಮಿತಿ (ಖಆಒಅ) ಅಧ್ಯಕ್ಷರಾದ ಎಂ.ಡಿ. ಹಬೀಬ್ ಅವರು ಪರೀಕ್ಷಾ ಸಾಮಗ್ರಿಗಳ ಕಿಟ್ ವಿತರಿಸಿದರು.
ಶಾಲಾ ಆವರಣದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಕಿಟ್ ಹಸ್ತಾಂತರಿಸಿ ಮಾತನಾಡಿದ ಎಂ.ಡಿ. ಹಬೀಬ್ ಅವರು, "ಬಡತನವು ಶಿಕ್ಷಣಕ್ಕೆ ಅಥವಾ ಸಾಧನೆಗೆ ಅಡ್ಡಿಯಾಗಬಾರದು. ಎಂದು ವಿದ್ಯಾರ್ಥಿಗಳು ಪರೀಕ್ಷೆಯ ಕಿಟ್ ನೀಡಲಾಗಿದೆ . ವಿದ್ಯಾರ್ಥಿಗಳು ಯಾವುದೇ ಆತಂಕವಿಲ್ಲದೆ, ಆತ್ಮವಿಶ್ವಾಸದಿಂದ ಪರೀಕ್ಷೆ ಬರೆದು ಶಾಲೆಗೆ ಕೀರ್ತಿ ತರಬೇಕು," ಎಂದು ಹಾರೈಸಿದರು.

**ಶೈಕ್ಷಣಿಕ ನೆರವು:** ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳಿಗೆ ಹೊರೆಯಾಗದಂತೆ ಪರೀಕ್ಷೆಗೆ ಬೇಕಾದ ಅಗತ್ಯ ಲೇಖನ ಸಾಮಗ್ರಿಗಳನ್ನು ಉಚಿತವಾಗಿ ನೀಡಲಾಯಿತು.

**ಪ್ರೋತ್ಸಾಹದ ನುಡಿ:** ಪರೀಕ್ಷಾ ಸಮಯದಲ್ಲಿ ಸಮಯದ ನಿರ್ವಹಣೆ ಮತ್ತು ಉತ್ತಮ ಅಂಕ ಗಳಿಕೆಯ ಕುರಿತು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಲಾಯಿತು.
**ಗಣ್ಯರ ಉಪಸ್ಥಿತಿ:** ಈ ಸಂದರ್ಭದಲ್ಲಿ ಶಾಲೆಯ ಮುಖ್ಯೋಪಾಧ್ಯಾಯರು, ಶಿಕ್ಷಕ ವೃಂದ ಹಾಗೂ ಎಸ್‌ಡಿಎಂಸಿ ಸದಸ್ಯರು ಹಾಜರಿದ್ದು, ಅಧ್ಯಕ್ಷರ ಈ ಜನಪರ ಕಾರ್ಯವನ್ನು ಶ್ಲಾಘಿಸಿದರು.
ಕಿಟ್ ಪಡೆದ ವಿದ್ಯಾರ್ಥಿಗಳು ಹಾಗೂ ಅವರ ಪೋಷಕರು ಎಸ್‌ಡಿಎಂಸಿ ಅಧ್ಯಕ್ಷರ ಈ ಕಾಳಜಿಗೆ ತುಂಬು ಹೃದಯದ ಕೃತಜ್ಞತೆ ಸಲ್ಲಿಸಿದರು.

# ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಕಲ್ಮಠ ಶ್ರೀ ಪ್ರಶಸ್ತಿ ಪ್ರಧಾನ ಸಮಾರಂಭ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಕಲ್ಮಠ ಪ್ರಾಥಮಿಕ ಶಾಲೆಯಲ್ಲಿ ಕಲ್ಮಠ ಲಿಂ. ಡಾ.ಶಿವಮೂರ್ತಿ ಶಿವಾಚಾರ್ಯ ಮಹಾ ಸ್ವಾಮಿಗಳವರ ಮೂರನೇ ಪುಣ್ಯಾರಾಧನೆ ಅಂಗವಾಗಿ ಹಮ್ಮಿಕೊಳ್ಳಲಾದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಕಲ್ಮಠ ಶ್ರೀ ಪ್ರಶಸ್ತಿ ಪ್ರಧಾನ ಸಮಾರಂಭ ಕಾರ್ಯಕ್ರಮವನ್ನು ಕಲ್ಮಠ ವಿದ್ಯಾಸಂಸ್ಥೆಯ ಅಧ್ಯಕ್ಷರಾದ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಉದ್ಘಾಟಿಸಿ ಮಾತನಾಡಿ ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಸಮಯ ಪಾಲನೆಗೆ ಹೆಚ್ಚಿನ ಮಹಾತ್ವವನ್ನು ನೀಡುವುದನ್ನು ಬೆಳೆಸಿಕೊಳ್ಳಬೇಕು ಹಾಗೂ ವಿದ್ಯಾರ್ಥಿ ಜೀವನದಲ್ಲಿ ಶಿಸ್ತುನ್ನು ರೂಡಿಸಿಕೊಳ್ಳುವ ಮೂಲಕ ಸಮಾಜದಲ್ಲಿ ಉತ್ತಮ ಪ್ರಜೆಗಳಾಗಿ ಬಾಳಬೇಕು ಎಂದು ತಿಳಿಸಿದರು.

ಸರ್ವೋದಯ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ದತ್ತಾತ್ರೇಯ ಮೇಟಿ ಮಾತನಾಡಿ ವಿದ್ಯಾರ್ಥಿಗಳು ಸದಾ ಓದಿನಲ್ಲಿ ಮಗ್ನರಾಗಿ, ಕ್ರಿಯಾಶೀಲರಾಗುವ ಮೂಲಕ ಕಲ್ಮಠ ಲಿಂ. ಡಾ.ಶಿವಮೂರ್ತಿ ಶಿವಾಚಾರ್ಯ ಮಹಾ ಸ್ವಾಮಿಗಳವರ ಆಶಯವನ್ನು ಈಡೇರಿಸಬೇಕು ಎಂದು ತಿಳಿಸಿದರು.
ಕಲ್ಮಠ ಪ್ರೌಢಶಾಲೆಯ ಶಿಕ್ಷಕರಾದ ಎಂ.ಎಂ.ಹಿರೇಮಠ್ "ಕಲ್ಮಠ ಶ್ರೀಗಳ ಜೀವನ ಮತ್ತು ಸಾಧನೆ" ಕುರಿತು ಉಪನ್ಯಾಸ ನೀಡಿದರು. ಏಳನೇ ತರಗತಿಯ ಪ್ರತಿಭಾನ್ವಿತ ವಿದ್ಯಾರ್ಥಿಗಳಾದ ಕಾವೇರಿ ಬಸವರಾಜ್, ಕೃಷ್ಣ ವೆಂಕಟೇಶ್, ಮನೋಹರ ವೀರಭದ್ರಪ್ಪ ರವರಿಗೆ ಕಲ್ಮಠ ಶ್ರೀ ವಿದ್ಯಾರತ್ನ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು .

ಕಾರ್ಯಕ್ರಮದಲ್ಲಿ ಶಿಕ್ಷಣ ಸಂಯೋಜಕರಾದ ರಾಚಮ್ಮ ,ಪ್ರಾಥಮಿಕ ಶಾಲೆಯ ಮುಖ್ಯಗುರುಗಳಾದ ಮಂಜುನಾಥ ಕಮತರ್,ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾದ ಎಸ್ .ಎಸ್. ಪಾಟೀಲ್, ಪದವಿ ಕಾಲೇಜಿನ ಪ್ರಾಚಾರ್ಯರಾದ ಸಿದ್ದನಗೌಡ ಪಾಟೀಲ್ ,ಕಲ್ಮಠ ಪ್ರೌಢಶಾಲೆ ಮುಖ್ಯೋಪಾಧ್ಯಾಯರಾದ ಪ್ರಭಯ್ಯಸ್ವಾಮಿ ,ದೈಹಿಕ ಶಿಕ್ಷಕರಾದ ಕೆಮ್ಯಾನಾಯ್ಕ ಇದ್ದರು.

# ಸರ್ಕಾರ,ಕೆಕೆಆರ್‌ಡಿಬಿ ಸಹಯೋಗದಲ್ಲಿ ವಿಮಾನ ಸೇವೆ ಪುನಾರಂಭಿಸಿ: ಡಾ ಅಜಯ್ ಸಿಂಗ್




**ಕಲಬುರಗಿ,ಮಾ.17:** ವಿಧಾನ ಮಂಡಲ ಅಧಿವೇಶನದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ. ಬಿ. ಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ವಿವಿಧ ವಿಮಾನಯಾನ ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ಜರುಗಿದ ಮಹತ್ವದ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಕೆಕೆಆರ್‌ಡಿಬಿ ಅಧ್ಯಕ್ಷ ಡಾ. ಅಜಯ್ ಸಿಂಗ್ ಅವರು ಸರ್ಕಾರ– ಕೆಕೆಆರ್‌ಡಿಬಿ ಸಹಯೋಗದಲ್ಲಿ ಕಲಬುರಗಿಯಿಂದ ವಿಮಾನ ಸೇವೆಗಳನ್ನು ಪುನಾರಂಭಿಸುವಂತೆ ಸಂಸ್ಥೆಗಳಿಗೆ ಆಗ್ರಹಿಸಿದರು.

ಬೆಂಗಳೂರಿನಿಂದ ಕಲಬುರಗಿ ಮತ್ತು ಬೀದರ್ ನಗರಗಳಿಗೆ ಹಾಗೂ ಅಲ್ಲಿಂದ ಬೆಂಗಳೂರಿಗೆ ವಿಮಾನಯಾನ ಸೇವೆಗಳನ್ನು ರಾಜ್ಯ ಸರ್ಕಾರ ಮತ್ತು ಕೆಕೆಆರ್‌ಡಿಬಿ ಸಹಾಭಾಗೀತ್ವದಲ್ಲಿ ಪುನರಾರಂಭಿಸುವ ಮತ್ತು ಬಲಪಡಿಸುವ ಕುರಿತು ಸಭೆಯಲ್ಲಿ ಚರ್ಚಿಸಲಾಗಿದೆ.

2019 ರಿಂದ ಅಭಿವೃದ್ಧಿಪಡಿಸಿದ ಕಲಬುರಗಿಯಲ್ಲಿ 742 ಎಕರೆ ಭೂಮಿ ಸೇರಿದಂತೆ ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರ (ಎಎಐ) ನಿರ್ವಹಿಸುವ ಸೌಲಭ್ಯಗಳನ್ನು ಬಳಸಿಕೊಂಡು ಕಾರ್ಯಾಚರಣೆ ನಡೆಸುವ ಕುರಿತು ಚರ್ಚೆಗಳು ನಡೆದವು. ಎಲ್ಲಾ ವಿಮಾನಗಳ ಕಾರ್ಯಾಚರಣೆಗೆ ನಾವು ಬದ್ಧರಾಗಿದ್ದೇವೆ ಎಂದು ವಿಮಾನಯಾನ ನಿರ್ವಾಹಕ ಸಂಸ್ಥೆಗಳ ಪ್ರತಿನಿಧಿಗಳು ಹೇಳಿದ್ದಾರೆಂದು ಡಾ. ಅಜಯ್ ಸಿಂಗ್ ಹೇಳಿದ್ದಾರೆ.

ಈ ಸಂದರ್ಭದಲ್ಲಿ ಸರ್ಕಾರದ ಹಿರಿಯ ಅಧಿಕಾರಿಗಳು ಹಾಗೂ ವಿವಿಧ ವಿಮಾನಯಾನ ಸಂಸ್ಥೆಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು. ಬೆಂಗಳೂರಿಗೆ ದೈನಂದಿನ ಸೇವೆಗಳಿಗಾಗಿ ಅಭಿವೃದ್ಧಿಪಡಿಸುವ, ಬೀದರ್‌ಗೆ ಬೆಳಗಿನ ಸೇವೆಗಳು ಮತ್ತು ಬೆಂಗಳೂರಿನಿಂದ ಕಲಬುರಗಿಗೆ ಸಂಜೆ ಸೇವೆಗಳನ್ನು ನೀಡಲು ಯೋಜಿಸುತ್ತಿರುವ ಬಗ್ಗೆ ವಿಮಾನ ಸೇವೆ ಸಂಸ್ಥೆಗಳು ಹೇಳಿವೆ.

# ಸರ್ವೀಕಲ್ ಕ್ಯಾನ್ಸರ್ ತಡೆಗೆ ಹೆಚ್‌ಪಿವಿ ಲಸಿಕೆ:ಸಿಇಓ ಡಾ.ಗಿರೀಶ ಬದೋಲೆ



**ಬೀದರ, ಮಾ.17:**ಸರ್ವಿಕಲ್ ಕ್ಯಾನ್ಸರ್ ತಡೆಗಟ್ಟುವುದಕ್ಕಾಗಿ 14 ವರ್ಷ ತುಂಬಿದ 15 ವರ್ಷದೊಳಗಿನ ಹೆಣ್ಣು ಮಕ್ಕಳಿಗೆ ಹೆಚ್.ಪಿ.ವಿ ಲಸಿಕೆ ನೀಡುವುದು ಅವಶ್ಯಕವಾಗಿದೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ ಹೇಳಿದರು.
ಅವರು ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಬೀದರ ಸಂಯುಕ್ತಾಶ್ರಯದಲ್ಲಿ ತಾಯಿ ಮತ್ತು ಮಕ್ಕಳ ಆರೈಕೆ ಕೇಂದ್ರ 100 ಹಾಸಿಗೆ ಆಸ್ಪತ್ರೆಯಲ್ಲಿ ಹಮ್ಮಿಕೊಂಡಿದ್ದ ಹೆಚ್.ಪಿ.ವಿ ಲಸಿಕಾಕರಣ ಚಾಲನಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಆರೋಗ್ಯ ಇಲಾಖೆಯಲ್ಲಿ ಪೋಲಿಯೋ ಲಸಿಕೆ ನೀಡಿ ಪೋಲಿಯೋ ನಿರ್ಮೂಲನೆ ಮಾಡಿದಂತೆ ಈ ಲಸಿಕೆ ನೀಡಿ ಹೆಣ್ಣು ಮಕ್ಕಳ ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟುವುದಕ್ಕಾಗಿ ತಮ್ಮ ಮಕ್ಕಳಿಗೆ ಈ ಲಸಿಕೆ ನೀಡುವಂತೆ ಎಲ್ಲಾ ಪಾಲಕ, ಪೋಷಕರ ಹಾಗೂ ತಾಯಿಂದಿರ ಜವಾಬ್ದಾರಿಯಾಗಿರುತ್ತದೆ. ಈ ಕಾರ್ಯಕ್ರಮದಲ್ಲಿ ಆರೋಗ್ಯ ಇಲಾಖೆ ಮತ್ತು ಶಿಕ್ಷಣ ಇಲಾಖೆಯ ಪಾತ್ರ ಬಹಳ ಮುಖ್ಯವಾಗಿರುತ್ತದೆ.
ಡಿ.ಡಿ.ಪಿ.ಐ ರವರು ಶಾಲೆಯಲ್ಲಿರುವ 14 ವರ್ಷ ತುಂಬಿದ 15 ವರ್ಷ ಒಳಗಿನ ಹೆಣ್ಣು ಮಕ್ಕಳಿಗೆ ಲಸಿಕೆ ಹಾಕಿಸಲು ಆರೋಗ್ಯ ಸಂಸ್ಥೆಗಳಿಗೆ ಕಳುಹಿಸುವಂತೆ ಕ್ರಮವಹಿಸಲು ತಿಳಿಸಿದರು.
ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಧ್ಯಾನೇಶ್ವರ ನೀರಗುಡೆ ಮಾತನಾಡಿ, ಇಲಾಖೆಯ ಮಾರ್ಗಸೂಚಿಯಂತೆ ಮೊದಲನೇ ಹಂತದಲ್ಲಿ ಎಲ್ಲಾ ಆರೋಗ್ಯ ಸಂಸ್ಥೆಗಳಲ್ಲಿ ಮಾತ್ರ ಲಸಿಕೆ ನೀಡಲಾಗುವುದು ಎಂದರು.

ಮಕ್ಕಳ ತಜ್ಞ ಡಾ.ವರ್ಷಾ ಮಾತನಾಡಿ, ಹೆಚ್.ಪಿ.ವಿ ಒಂದು ವೈರಸ್ ಇದು ಗರ್ಭಕಂಠದ ಕ್ಯಾನ್ಸರ್‌ಗೆ ಕಾರಣವಾಗುತ್ತದೆ, ಇಲಾಖೆಯ ಮಾರ್ಗಸೂಚಿಯಂತೆ 14 ವರ್ಷ ತುಂಬಿದ 15 ವರ್ಷ ಒಳಗಿನ ಹೆಣ್ಣು ಮಕ್ಕಳು ಮೊದಲು ಆಹಾರ ಸೇವಿಸಿದ ನಂತರ ಈ ಲಸಿಕೆ ತೆಗೆದುಕೊಳ್ಳುವುದು ಅವಶ್ಯಕವಾಗಿರುತ್ತದೆ ಎಂದರು.

ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ. ಶಿವಶಂಕರ.ಬಿ. ಮಾತನಾಡಿ, ಹೆಚ್.ಪಿ.ವಿ ಲಸಿಕೆ ಸುರಕ್ಷಿತವಾಗಿದ್ದು 14 ವರ್ಷ ತುಂಬಿದ 15 ವರ್ಷ ಒಳಗಿನ ಹೆಣ್ಣು ಮಕ್ಕಳ ಗರ್ಭ ಕಂಠದ ಕ್ಯಾನ್ಸರ್ ತಡೆಗಟ್ಟುವ ಕುರಿತು ಈ ಲಸಿಕೆ ನೀಡಲಾಗುವುದು. ಈ ಲಸಿಕೆ ಪಡೆದ ನಂತರ ಯು.ವಿನ್. ಪೋರ್ಟಲ್‌ನಿಂದ ಪ್ರಮಾಣಪತ್ರ ಪಡೆದುಕೊಳ್ಳಲು ತಿಳಿಸಿದರು.

ಈ ಸಂದರ್ಭದಲ್ಲಿ ಡಾ. ದಿಲೀಪ ಡೋಂಗರೆ, ಡಾ. ಕಿರಣ ಪಾಟೀಲ, ಡಾ. ಶಾಂತಲಿಂಗ್ ಪಾಟೀಲ, ಉಮೇಶ ಬಿರಾದರ,. ಶಿವಶಂಕರ ಬೇಮಳಗಿ, ಗುರುನಾಥ ಕವಳೆ, ಓಂಕಾರ, ಲೋಕೇಶ, ಶಾಂತಾ, ಅಜಯ ಪಾಟೀಲ, ರವೀಂದ್ರ, ಅಬ್ರಹಾಮ, ಅನೀತಾ, ಅವಿನಾಶ ಹೆಚ್.ಐ.ಓ, ಆಶಾ ಕಾರ್ಯಕರ್ತೆಯರು, ಆರೋಗ್ಯ ಇಲಾಖೆಯ ಅಧಿಕಾರಿ ಸೇರಿದಂತೆ ಸಿಬ್ಬಂದಿಗಳು ಉಪಸ್ಥಿತರಿದ್ದರು.
**ಇಂದು ಜನಸಂಪರ್ಕ ಸಭೆ**–ಬೀದರ ಕಾರ್ಯ ಮತ್ತು ಪಾಲನೆ ವಿಭಾಗ ವ್ಯಾಪ್ತಿಯ ಔರಾದ(ಬಿ), ಭಾಲ್ಕಿ, ಬೀದರ, ಕಮಠಾಣ ಉಪ ವಿಭಾಗದಲಿ ಮಾರ್ಚ್. 18 ರಂದು ಜನ ಸಂಪರ್ಕಸಭೆ ಹಾಗೂ ಕೆಇಆರ್‌ಸಿಯ (ಎಸ್.ಒ.ಪಿ) ಮಾನದಂಡಗಳನ್ನು ಕುರಿತು ಅರಿವು ಮೂಡಿಸುವಿಕೆ ಕಾರ್ಯಕ್ರಮವನ್ನು ಕಾರ್ಯನಿರ್ವಾಹಕ ಇಂಜಿನಿಯರರು(ವಿ),/ ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರರು(ವಿ) ಗುವಿಸಕಂನಿ ಅವರ ಅಧ್ಯಕ್ಷತೆಯಲ್ಲಿ ಏರ್ಪಡಿಸಲಾಗಿರುತ್ತದೆ.

ಜನಸಂಪರ್ಕ ಸಭೆಗಳ ವಿವರ: ಮಾರ್ಚ್.18 ರಂದು ಬೆಳಿಗ್ಗೆ 10.30 ಗಂಟೆಗೆ ಔರಾದ್ (ಬಿ) ಉಪ ವಿಭಾಗ ಕಛೇರಿಯಲ್ಲಿ, ಬೀದರ (ನಗರ) ಉಪ ವಿಭಾಗ ಕಛೇರಿಯಲ್ಲಿ, ಕಮಠಾಣ ಉಪ ವಿಭಾಗ ಕಛೇರಿಯಲ್ಲಿ ಹಾಗೂ ಮಧ್ಯಾಹ್ನ 2.30 ಗಂಟೆಗೆ ಭಾಲ್ಕಿ ಉಪ ವಿಭಾಗ ಕಛೇರಿಯಲ್ಲಿ ಬೀದರ (ಗ್ರಾಮೀಣ) ಉಪ ವಿಭಾಗ ಕಛೇರಿಯಲ್ಲಿ ಸಭೆಗಳು ನಡೆಯಲಿವೆ.
ಸಾರ್ವಜನಿಕರು ಹಾಗೂ ಗುವಿಸಕಂನಿ ಗ್ರಾಹಕರು ಸಭೆಯಲ್ಲಿ ಉಪಸ್ಥಿತರಿದ್ದು, ಕುಂದು ಕೊರತೆಯ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ ಎಂದು ಬೀದರ ಕಾರ್ಯ ಮತ್ತು ಪಾಲನೆ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು(ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE